ಸಂಪುಟ : 4 ಸಂಚಿಕೆ : 35 ಪುಟ : 4 ಬೆಲೆ : ರೂ. 4 ರವಿವಾರ, ಮಾರ್ಚ್. 19, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 35 Pages : 4 Rate : 4 Rs Sunday, March 19, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com



## ಅನುಭವದ ಮೇಲೆ ಸಿದ್ದುಗೆ ರಾಹುಲ್ ಗಾಂಧಿ ಸಲಹೆ: ಜೋಶಿ ವ್ಯಂಗ್ಯ

ವಿಜಯಪುರ: ಉತ್ತರ ಪ್ರದೇಶದ ಅಮೇಥಿ ಕ್ಷೇತ್ರದಲ್ಲಿ ತಲೆತಲಾಂತರದಿಂದ ಸ್ಪರ್ಧಿಸಿ ಗೆಲ್ಲುತ್ತಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೋತಿದ್ದಾರೆ. ಈ ಅನುಭವದ ಆಧಾರದಲ್ಲಿ ಕೋಲಾರ ಕ್ಷೇತ್ರದಿಂದ ಸ್ಪರ್ಧೆ ಬೇಡ ಎಂದು ಸಿದ್ದರಾಮಯ್ಯಗೆ ಸಲಹೆ ನೀಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವ್ಯಂಗ್ಯವಾಡಿದ್ದಾರೆ.

ಶನಿವಾರ ನಗರದಲ್ಲಿ ಸರ್ಕಾರದ ಫಲಾನುಭವಿಗಳ ಸಮಾವೇಶದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದಾಗ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈಶಾನ್ಯ ಭಾರತದಲ್ಲಿ ಒಂದೂ ಕ್ಷೇತ್ರದಲ್ಲಿ ಕಾಂಗ್ರೆಸ್ ಸಂಸದರಿಲ್ಲ. ಕಾಂಗ್ರೆಸ್ ಅಷ್ಟರ ಮಟ್ಟಿಗೆ ಸೋತು ಸುಣ್ಣವಾಗಿದೆ ಎಂದು ಟೀಕಿಸಿದರು.

## ಆಹಾರ ಭದ್ರತೆಯ ಸವಾಲುಗಳನ್ನು ನಿಭಾಯಿಸಲು ಸಿರಿಧಾನ್ಯ ಸಹಾಯಕ: ಪ್ರಧಾನಿ

ನವದೆಹಲಿ: ಆಹಾರ ಭದ್ರತೆ ಮತ್ತು ಆಹಾರ ಪದ್ಧತಿಯ ಸವಾಲುಗಳನ್ನು ನಿಭಾಯಿಸಲು ಸಿರಿಧಾನ್ಯ ಸಹಾಯ ಮಾಡುತ್ತದೆ ಎಂದ ಪ್ರಧಾನಿ ನರೇಂದ್ರ ಮೋದಿ ಅವರು, ರಾಷ್ಟ್ರೀಯ ಆಹಾರ ಬುಟ್ಟಿಯಲ್ಲಿ ಪೌಷ್ಟಿಕ-ಧಾನ್ಯಗಳ ಪಾಲನ್ನು ಹೆಚ್ಚಿಸಲು ಕೃಷಿ ವಿಜ್ಞಾನಿಗಳಿಗೆ ಶನಿವಾರ ಕರೆ ನೀಡಿದರು.

ಗ್ಲೋಬಲ್ ಮಿಲೆಟ್ಸ್ (ಶ್ರೀ ಅನ್ನ) ಸಮ್ಮೇಳನವನ್ನು ಉದ್ಘಾಟಿಸಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, 'ಭಾರತದ ಪ್ರಸ್ತಾವನೆ ಮತ್ತು ಪ್ರಯತ್ನಗಳ ನಂತರ, ವಿಶ್ವಸಂಸ್ಥೆಯು 2023 ಅನ್ನು 'ಅಂತರರಾಷ್ಟ್ರೀಯ ಸಿರಿಧಾನ್ಯ ವರ್ಷ' ಎಂದು ಘೋಷಿಸಿರುವುದು ದೇಶಕ್ಕೆ ಸಂದಿರುವ ಗೌರವದ ವಿಷಯವಾಗಿದೆ" ಎಂದು ಹೇಳಿದರು.

'ಸಿರಿಧಾನ್ಯ ಅಥವಾ ಶ್ರೀ ಅನ್ನವನ್ನು ಜಾಗತಿಕ ಆಂದೋಲನವಾಗಿ ಉತ್ತೇಜಿಸಲು ಭಾರತ ನಿರಂತರವಾಗಿ ಕೆಲಸ ಮಾಡುತ್ತಿದೆ.

ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಲ್ಲಿ ಮತ್ತು ರಾಸಾಯನಿಕಗಳು ಮತ್ತು ರಸಗೊಬ್ಬರಗಳಿಲ್ಲದೆ ಸಿರಿಧಾನ್ಯವನ್ನು ಸುಲಭವಾಗಿ ಬೆಳೆಯಬಹುದು. ಭಾರತದ ಸಿರಿಧಾನ್ಯ ಮಿಷನ್ ದೇಶದ 2.5 ಕೋಟಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಪ್ರಯೋಜನವನ್ನು ನೀಡುತ್ತದೆ' ಎಂದು ಹೇಳಿದರು.

ರಾಷ್ಟ್ರೀಯ ಆಹಾರ ಬುಟ್ಟಿಯಲ್ಲಿ ಸಿರಿಧಾನ್ಯಗಳು



ಕೇವಲ 5-6 ಪ್ರತಿಶತವನ್ನು ಹೊಂದಿವೆ. ಭಾರತದ ವಿಜ್ಞಾನಿಗಳು ಮತ್ತು ಕೃಷಿ ತಜ್ಞರು ಈ ಪಾಲನ್ನು ಹೆಚ್ಚಿಸಲು ತ್ವರಿತವಾಗಿ ಕೆಲಸ ಮಾಡಲು ನಾನು ಒತ್ತಾಯಿಸುತ್ತೇನೆ. ಅದಕ್ಕಾಗಿ ನಾವು ಸಾಧಿಸಬಹುದಾದ ಗುರಿಗಳನ್ನು ಹೊಂದಿಸಬೇಕಾಗಿದೆ ಎಂದು ಮೋದಿ ಹೇಳಿದರು.

ಸರ್ಕಾರವು ಆಹಾರ ಸಂಸ್ಕರಣಾ ವಲಯಕ್ಕೆ ಪ್ರೊಡಕ್ಷನ್ ಲಿಂಕ್ಡ್ ಇನ್ಸೆಂಟಿವ್ (ಪಿಎಲ್ಐ) ಯೋಜನೆಯನ್ನು ಪ್ರಾರಂಭಿಸಿದೆ. ಸಿರಿಧಾನ್ಯ ಆಧಾರಿತ ಉತ್ಪನ್ನಗಳ ಉತ್ಪಾದನೆಯನ್ನು ಹೆಚ್ಚಿಸಲು ಕಂಪನಿಗಳು ಈ ಕಾರ್ಯಕ್ರಮದ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಕೋರಿದರು.

ಸಿರಿಧಾನ್ಯ ಅಥವಾ ಪೌಷ್ಟಿಕ-ಧಾನ್ಯಗಳ ಪ್ರಾಮುಖ್ಯತೆಯನ್ನು ಗುರುತಿಸಿ, ಮತ್ತು ಜನರಿಗೆ ಪೌಷ್ಟಿಕ ಆಹಾರವನ್ನು ಒದಗಿಸುವುದರೊಂದಿಗೆ ದೇಶೀಯ ಮತ್ತು ಜಾಗತಿಕ ಬೇಡಿಕೆಯನ್ನು ಸೃಷ್ಟಿಸುವ ಮೂಲಕ, ಭಾರತವು 2023ನೇ ವರ್ಷವನ್ನು ಅಂತರರಾಷ್ಟ್ರೀಯ ಸಿರಿಧಾನ್ಯ ವರ್ಷವೆಂದು ಘೋಷಿಸಲು ವಿಶ್ವಸಂಸ್ಥೆಯ ಸಾಮಾನ್ಯ ಸಭೆ (ಯುಎನ್‌ಜಿಎ) ನಿರ್ಣಯವನ್ನು ಅಂಗೀಕರಿಸಿತು.

ಭಾರತದ ಪ್ರಸ್ತಾಪವನ್ನು 72 ದೇಶಗಳು ಬೆಂಬಲಿಸಿದವು ಮತ್ತು ಯುಎನ್‌ಜಿಎ ಮಾರ್ಚ್ 2021 ರಲ್ಲಿ 2023ನೇ ವರ್ಷವನ್ನು ಅಂತರರಾಷ್ಟ್ರೀಯ ಸಿರಿಧಾನ್ಯ ವರ್ಷವೆಂದು ಘೋಷಿಸಿತು.

ಭಾರತವು 170 ಲಕ್ಷ ಟನ್‌ಗಳಿಗಿಂತ ಹೆಚ್ಚು ಸಿರಿಧಾನ್ಯವನ್ನು ಉತ್ಪಾದಿಸುತ್ತದೆ. ಇದು ಏಷ್ಯಾದ ಶೇ 80 ಮತ್ತು ಜಾಗತಿಕ ಉತ್ಪಾದನೆಯ ಶೇ 20ರಷ್ಟಿದೆ.

ಸಿರಿಧಾನ್ಯದ ಜಾಗತಿಕ ಸರಾಸರಿ ಇಳುವರಿ 1,229 ಕೆಜಿ/ಹೆಕ್ಟೇರ್ ಆಗಿದ್ದರೆ, ಭಾರತದಲ್ಲಿ ಇಳುವರಿ 1,239 ಕೆಜಿ/ಹೆಕ್ಟೇರ್ ಆಗಿದೆ.

ಪ್ರಧಾನಿಯವರು ಕಸ್ಟಮೈಸ್ ಮಾಡಿದ ಪೋಸ್ಟಲ್ ಸ್ಟ್ಯಾಂಪ್ ಮತ್ತು 75 ರೂಪಾಯಿ ಕರೆನ್ಸಿ ನಾಣ್ಯವನ್ನು ಅಂತಾರಾಷ್ಟ್ರೀಯ ಸಿರಿಧಾನ್ಯ ವರ್ಷ (ಐವೈಎಂಇ)-2023 ರಂದು ಅನಾವರಣಗೊಳಿಸಿದರು.

## ಉರಿಗೌಡ, ನಂಜೇಗೌಡ ವಿಚಾರದಿಂದ ಮತ ವಿಭಜನೆ ಸಾಧ್ಯವಿಲ್ಲ: ಹೆಚ್‌ಡಿಕೆ



ಬೆಂಗಳೂರು: ಉರಿಗೌಡ, ನಂಜೇಗೌಡ ವಿಚಾರದಿಂದ ಒಕ್ಕಲಿಗರ ಮತ ವಿಭಜಿಸಲು ಸಾಧ್ಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಕ್ಕಲಿಗ ಮತಗಳು ಭದ್ರವಾಗಿವೆ. ಯಾವ್ಯಾವ ವಿಷಯದಲ್ಲೂ ಬದಲಾವಣೆ ಮಾಡಲು ಸಾಧ್ಯವಿಲ್ಲ.

ಈ ಘಟನೆಯಿಂದ ಒಕ್ಕಲಿಗರ ಮತ ಬದಲಾಗಲ್ಲ. ಇವೆಲ್ಲ ಕಾಲ್ಪನಿಕ ಕಥೆ ಎಂದು ತಿಳಿಸಿದರು.

ಉರಿಗೌಡ, ನಂಜೇಗೌಡ ಇದ್ದರೋ ಇಲ್ಲವೋ ಗೊತ್ತಿಲ್ಲ. ಜೀವಂತ ಬದುಕಿರುವ ಉರಿಗೌಡ, ನಂಜೇಗೌಡರ ಬಗ್ಗೆ ಯೋಚಿಸಬೇಕು. ಈ ವಿಚಾರ ಈಗ ಅಪ್ರಸ್ತುತ ಎಂದರು. ಒಂದು ಸಮಾಜವನ್ನು ಇನ್ನೊಂದು ಸಮಾಜ ಅನುಮಾನದಿಂದ ನೋಡುವಂತಾಗಿದೆ. ಬಿಜೆಪಿ ನೈತಿಕತೆ ಉಳಿಸಿಕೊಳ್ಳದೆ ಇದನ್ನು ಎತ್ತಿಕಟ್ಟುತ್ತಿದೆ ಎಂದು ಅವರ ಆರೋಪಿಸಿದರು.

ಸಿದ್ದು ವಿರುದ್ಧ ಬಿ.ವೈ.ವಿಜಯೇಂದ್ರ ಕಣಕ್ಕೆ..?

ಬಿಜೆಪಿಗೆ ನೈತಿಕತೆ ಇಲ್ಲ. ಇದನ್ನು ಕೇಳಿದ್ದು ಯಾರು ಎಂದು ಪ್ರಶ್ನಿಸಿದ ಅವರು, ಆದಿ ಚುಂಚನಗಿರಿ ಮಠದ ಪೀಠಾಧ್ಯಕ್ಷರಾಗಿದ್ದ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರ ಹೆಸರಿದ್ದ ಜಾಗದಲ್ಲಿ, ಇವರಿಬ್ಬರ ಹೆಸರನ್ನು ದ್ವಾರಕ್ಕೆ ಹಾಕಿದರು. ವಿರೋಧ ವ್ಯಕ್ತವಾದ ಬಳಿಕ ತೆರವುಗೊಳಿಸಿದರು.

ಇಬ್ಬರ ಹೆಸರಲ್ಲಿ ಸಿನಿಮಾ ಮಾಡಬಹುದು.ಇದರಿಂದ ಹಣ ಮಾಡಬಹುದು ಅಷ್ಟೇ.ಬೇರೆ ಯಾವುದೇ ಬದಲಾವಣೆ ಸಾಧ್ಯವಿಲ್ಲ ಎಂದು ಹೇಳಿದರು. ಕಾಂಗ್ರೆಸ್, ಬಿಜೆಪಿ ಪಕ್ಷಗಳು ರೌಡಿ ಶೀಟರ್ಗಳಿಗೆ ಪಕ್ಷದಲ್ಲಿ ಟಿಕೆಟ್ ನೀಡುತ್ತಿದ್ದಾರೆ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಆಸೆಗೆ ಅಮಾಯಕರ ಜೀವನ ಬಲಿ ಪಡೆದವರನ್ನ ಪಕ್ಷಕ್ಕೆ ಸೇರಿಸಿಕೊಂಡು ಟಿಕೆಟ್ ಕೊಡುತ್ತಿದ್ದಾರೆ. ಅದೇ ಅವರ ಪಕ್ಷಕ್ಕೆ ಮುಳ್ಳಾಗಲಿದೆ. ಪಾಪದ ಹಣ ಮಾಡಲು ಹೊರಟಿದ್ದು, ಅವರಿಗೆ ಮುಳುವಾಗಲಿದೆ ಎಂದರು.

ಪಕ್ಷದ ಪಂಚರತ್ನ ರಥಯಾತ್ರೆ ರಾಜ್ಯದ 85ಕ್ಷೇತ್ರದಲ್ಲಿ ಪೂರ್ಣಗೊಳಿಸಲಾಗಿದೆ. ಮಾ. 26ರಂದು ಪಂಚರತ್ನ ಯಾತ್ರೆಯ ಬೃಹತ್ ಸಮಾವೇಶ ಮಾಡಲು ನಿರ್ಧಾರ ಮಾಡಿದ್ದೇವೆ. ಯಾವ ರೀತಿ ಪಕ್ಷದ ಅಭ್ಯರ್ಥಿ, ಕಾರ್ಯಕರ್ತರು ಕೆಲಸ ಮಾಡಬೇಕು ಎಂದು ಪೂರ್ವಬಾವಿ ಸಭೆ ಮಾಡುವುದಾಗಿ ಹೇಳಿದರು.

ಕನಿಷ್ಠ 10ಲಕ್ಷ ಅಭಿಮಾನಿಗಳು, ಮತದಾರರನ್ನು ಸಮಾವೇಶಕ್ಕೆ ಸೇರಿಸಲು ನಿರ್ಧಾರ ಮಾಡಲಾಗಿದೆ ಎಂದರು. ಸೇರ್ಪಡೆ: ಜೆಡಿಎಸ್ ಕಚೇರಿಯಲ್ಲಿ ದೇವದುರ್ಗದ ಅಭ್ಯರ್ಥಿ ಕರೆಮ್ಮ ಬೆಂಬಲಿಸಿ ಕಾಂಗ್ರೆಸ್, ಬಿಜೆಪಿ ಪಕ್ಷದ ನೂರಕ್ಕೂ ಹೆಚ್ಚು ಕಾರ್ಯಕರ್ತರು ಜೆಡಿಎಸ್ ಸೇರ್ಪಡೆಯಾದರು. ಪಕ್ಷದ ಶಾಲು ಹೊದಿಸಿ ಅವರನ್ನು ಹೆಚ್ಡಿಕೆ ಬರಮಾಡಿಕೊಂಡರು.

## ಕೋಲಾರದಿಂದ ಸ್ಪರ್ಧಿಸದಂತೆ ಸಿದ್ದರಾಮಯ್ಯಗೆ ರಾಹುಲ್ ಗಾಂಧಿ ಸಲಹೆ



ನವದೆಹಲಿ :ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ನ ಕೇಂದ್ರ ಚುನಾವಣಾ ಸಮಿತಿ ಸಭೆ ನಡೆದಿದ್ದು, 125 ಅಭ್ಯರ್ಥಿಗಳ ಹೆಸರು ಅಂತಿಮಗೊಳಿಸಲಾಗಿದೆ. ಸುಮಾರು 3 ಗಂಟೆಗಳ ಕಾಲ ನಡೆದ ಸಭೆಯಲ್ಲಿ 125 ಕ್ಷೇತ್ರಗಳ ಅಭ್ಯರ್ಥಿಗಳ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗಿದೆ.

71 ಮಂದಿ ಹಾಲಿ ಶಾಸಕರಿಗೆ ಮತ್ತೆ ಟಿಕೆಟ್ ನೀಡಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಯುಗಾದಿ ಹಬ್ಬದ ನಂತರ ಪಟ್ಟಿ ಬಿಡುಗಡೆ ಮಾಡಲು ಕಾಂಗ್ರೆಸ್ ನಾಯಕರು ನಿರ್ಧರಿಸಿದ್ದಾರೆ. ರಾಜ್ಯ ಘಟಕದ ನಾಯಕರ ಸಲಹೆ ಮೇರೆಗೆ ಕಾಂಗ್ರೆಸ್ ಹೈಕಮಾಂಡ್ ಈ ನಿರ್ಧಾರ ಕೈಗೊಂಡಿದೆ.

ಈ ನಡುವೆ ಕೋಲಾರ ಕ್ಷೇತ್ರದಿಂದ ಸ್ಪರ್ಧಿಸಲು ಸಿದ್ಧತೆ ನಡೆಸಿರುವ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ರಾಹುಲ್ ಗಾಂಧಿ ಮಹತ್ವದ ಸಲಹೆಯೊದನ್ನು ನೀಡಿದ್ದು, ಕೋಲಾರ ಕ್ಷೇತ್ರದಿಂದ ಸ್ಪರ್ಧಿಸಿದಂತೆ ಸಲಹೆ ನೀಡಿದ್ದಾರೆ ಎನ್ನಲಾಗಿದೆ. ಕೋಲಾರದಿಂದ ಸ್ಪರ್ಧೆ ಮಾಡಬೇಡಿ, ವರುಣಾ ಕ್ಷೇತ್ರದಿಂದಲೇ ಸ್ಪರ್ಧಿಸುವಂತೆ ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ ಎಂದು ಹೇಳಲಾಗಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ವಿಪಕ್ಷ ನಾಯಕ ಸಿದ್ದರಾಮಯ್ಯ, ಹೈಕಮಾಂಡ್ ಹೇಳಿದ ಕ್ಷೇತ್ರದಿಂದ ನಾನು ಸ್ಪರ್ಧಿಸುತ್ತೇನೆ. ನಂಜನಗೂಡು ಕ್ಷೇತ್ರದಿಂದ ಧ್ರುವನಾರಾಯಣ ಪುತ್ರ ಸ್ಪರ್ಧಿಸುತ್ತಾರೆ. ನಂಜನಗೂಡು ಕ್ಷೇತ್ರದಿಂದ ಮಹದೇವಪ್ಪ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ ಎಂದರು.

## ಫ್ಲೆಕ್ಸ್ ವಿಚಾರಕ್ಕೆ ಕಾಂಗ್ರೆಸ್-ಬಿಜೆಪಿ ಕಾರ್ಯಕರ್ತರ ನಡುವೆ ಮಾರಾಮಾರಿ: ಎಫ್ಐಆರ್ ದಾಖಲು

ಬೆಂಗಳೂರು: ಫ್ಲೆಕ್ಸ್ ವಿಚಾರವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರ ನಡುವೆ ಮಾರಾಮಾರಿ ನಡೆದಿರುವ ಘಟನೆ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ವಿಜಯನಗರದ ಎಂ.ಸಿ.ಲೇಔಟ್‌ನ ಬಿಜಿಎಸ್ ಆಟದ ಮೈದಾನದಲ್ಲಿ ಶುಕ್ರವಾರ ನಡೆದಿದೆ.

ಗೋವಿಂದರಾಜ ನಗರ ಕ್ಷೆ?ತ್ರದ ಮಾಜಿ ಶಾಸಕ ಪ್ರಿಯಾಕೃಷ್ಣ ಬೆಂಬಲಿಗರು ಮತ್ತು ಹಾಲಿ ಶಾಸಕ, ಸಚಿವರೂ ಆದ ವಿ.ಸೋಮಣ್ಣ ಬೆಂಬಲಿಗರ ನಡುವೆ ಈ ಮಾರಾಮಾರಿ ನಡೆದಿದೆ ಎನ್ನಲಾಗಿದೆ.

ಕಾಂಗ್ರೆಸ್ ಬೆಂಬಲಿಗರು ಬಿಜಿಎಸ್ ಆಟದ ಮೈದಾನದಲ್ಲಿ ಮಾ.19ರಂದು ಕಾರ್ಯಕ್ರಮ ನಡೆಸಲು ಬಿಬಿಎಂಪಿಯಿಂದ ಅನುಮತಿ ಪಡೆದಿದ್ದರು. ಆದರೆ, ಯುಗಾದಿ ಉತ್ಸವ ಕಾರ್ಯಕ್ರಮ ನಡೆಸಲು ಶುಕ್ರವಾರ ಮೈದಾನದಲ್ಲಿ ಫ್ಲೆಕ್ಸ್ ಅಳವಡಿಸಲು ಸಿದ್ಧತೆ ನಡೆಸುತ್ತಿದ್ದರು ಎನ್ನಲಾಗಿದೆ.

ಇದನ್ನು ಬಿಜೆಪಿ ಕಾರ್ಯಕರ್ತರು ಪ್ರಶ್ನೆ ಮಾಡಿದಾಗ ಎರಡೂ ಗುಂಪುಗಳ ನಡುವೆ ವಾಗ್ವಾದ ನಡೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿ ದೊಣ್ಣೆ-ಕಲ್ಲುಗಳಿಂದ ಹೊಡೆದಾಡಿಕೊಂಡಿದ್ದಾರೆ.

ಕೊನೆಗೆ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪೊಲೀಸರು ಸ್ಥಳದಲ್ಲಿ ಲಾಠಿಚಾರ್ಜ್ ನಡೆಸಿದ್ದಾರೆಂದು ತಿಳಿದುಬಂದಿದೆ. ಈ ಗಲಾಟೆಯಲ್ಲಿ ಬಿಜೆಪಿಯ ಹಲವು ಕಾರ್ಯಕರ್ತರು ಗಾಯಗೊಂಡಿದ್ದು ಆಸ್ಪತ್ರೆಗೆ




ದಾಖಲಾಗಿದ್ದಾರೆನ್ನಲಾಗಿದೆ.

ಘಟನೆ ಸಂಬಂಧ ಗೋವಿಂದರಾಜ ನಗರ ಠಾಣೆ ಪೊಲೀಸರು ದೂರು-ಪ್ರತಿದೂರು ಸ್ವಿ?ಕರಿಸಿದ್ದು, ಇದೀಗ ಮೂರು ಎಫ್ಐಆರ್ ಗಳನ್ನು ದಾಖಲಿಸಿಕೊಂಡಿದ್ದಾರೆಂದು ತಿಳಿದುಬಂದಿದೆ.

ಎರಡೂ ಗುಂಪುಗಳು ಕಲ್ಲು ತೂರಾಟ ನಡೆಸಿದ್ದು, ನಮ್ಮ ಪೊಲೀಸ್ ಸಿಬ್ಬಂದಿಗೂ ಗಾಯಗಳಾಗಿವೆ. ಘಟನೆಗೆ ಸಂಬಂಧಿಸಿದಂತೆ 3 ಎಫ್ಐಆರ್‌ಗಳು ದಾಖಲಾಗಿವೆ. ತನಿಖೆ ನಡೆಸಲಾಗುತ್ತಿದೆ ಎಂದು ಬೆಂಗಳೂರು ನಗರ ಪಶ್ಚಿಮ ವಿಭಾಗದ ಡಿಸಿಪಿ ಲಕ್ಷ್ಮಣ ಬಿ ನಿಂಬರಗಿ ಹೇಳಿದ್ದಾರೆ.

## ಕೆರೆಯಂತಾದ ಬೆಂಗಳೂರು-ಮೈಸೂರು ದಶಪಥ ಹೆದ್ದಾರಿ; ಸರಣಿ ಅಪಘಾತ



ರಾಮನಗರ: ಕಳೆದ ವಾರ ಪ್ರಧಾನಿ ಮೋದಿ ಲೋಕಾರ್ಪಣೆ ಮಾಡಿದ್ದ ಬೆಂಗಳೂರು-ಮೈಸೂರಿನ ದಶಪಥ ಹೆದ್ದಾರಿ ಸಣ್ಣ ಮಳೆಗೆ ಕೆರೆಯಂತಾಗಿದೆ. ರಸ್ತೆಯಲ್ಲಿ ಮಳೆ ನೀರು ನಿಂತಿದ್ದರಿಂದ ವಾಹನಗಳು ಕೆಟ್ಟು ನಿಂತಿದ್ದು ಹಿಂದೆಯಿಂದ ಬಂದ ವಾಹನಗಳು ಡಿಕ್ಕಿಯಾಗಿ ಸರಣಿ ಅಪಘಾತ ಸಂಭಸಿವೆ.

ರಾಮನಗರ ಸಮೀಪದ ಸಂಘ ಬಸವನದೊಡ್ಡಿ ಬಳಿ ಹೆದ್ದಾರಿಯು ಮಳೆಗೆ ಸಂಪೂರ್ಣ ಜಲಾವೃತವಾಗಿದೆ. ಇದರಿಂದ ಮಳೆ ನೀರಿನಲ್ಲಿ ಕೆಟ್ಟುನಿಂತ ಕಾರಿಗೆ ಹಿಂಬದಿಯಿಂದ ಲಾರಿ ಬಂದು ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಕಾರು ಸಂಪೂರ್ಣ ಜಖಂ ಆಗಿದ್ದು ಸದ್ಯ ಕಾರಿನಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಹೆದ್ದಾರಿ ಪ್ರಾಧಿಕಾರಕ್ಕೆ ಕರೆ ಮಾಡಿದರು ಅಧಿಕಾರಿಗಳು ನೆರವಿಗೆ ಬಂದಿಲ್ಲ. ಹೀಗಾಗಿ ಸವಾರರು ಸರ್ಕಾರ ಹಾಗೂ ಹೆದ್ದಾರಿ ಪ್ರಾಧಿಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನೀರಿನಲ್ಲೇ ಕೆಲ ವಾಹನಗಳು ಕೆಟ್ಟು ನಿಂತು ಸವಾರರು ಪರದಾಡುವಂತಾಗಿದೆ. ಅಲ್ಲದೇ ಹಿಂದೆ ಬಂದು ವಾಹನಗಳು ಡಿಕ್ಕಿಯಾಗಿದ್ದರಿಂದ ಸರಣಿ ಅಪಘಾತ ಸಂಭವಿಸಿದೆ. ಹೆದ್ದಾರಿ ನಿರ್ಮಾಣವು ತರಾತುರಿಯಲ್ಲಿ ನಿರ್ಮಿಸಲಾಗಿದ್ದು ನೀರು ಸರಾಗವಾಗಿ ಹರಿದು ಹೋಗಲು ಯಾವುದೇ ವ್ಯವಸ್ಥೆ ಮಾಡದಿರೋದಕ್ಕೆ ಅವಾಂತರ ಸೃಷ್ಟಿಯಾಗಿದೆ. ದುಬಾರಿ ಟೋಲ್ ಕಟ್ಟಿದರೂ ಸರಿಯಾದ ವ್ಯವಸ್ಥೆ ಇಲ್ಲ ಎಂದು ಹೆದ್ದಾರಿ ಪ್ರಾಧಿಕಾರದ ವಿರುದ್ಧ ವಾಹನ ಸವಾರರು ಗರಂ ಆಗಿದ್ದಾರೆ.

## ತಂದೆಗಾಗಿ ವರುಣ ಕ್ಷೇತ್ರ ಬಿಡಲು ಸಿದ್ಧ: ಶಾಸಕ ಯತೀಂದ್ರ



ಮೈಸೂರು: ಕೋಲಾರದಿಂದ ಮಾಜಿ ಸಿಎಂ ಸಿದ್ದರಾಮಯ್ಯ ಸ್ಪರ್ಧೆ ಮಾಡುವುದು ಬೇಡ ಎಂದು ಕಾಂಗ್ರೆಸ್ ಹೈಕಮಾಂಡ್ ಹೇಳಿರುವುದಾಗಿ ವರದಿಯಾಗಿದೆ. ಈ ಬೆನ್ನಲ್ಲೇ ಇದಕ್ಕೆ ಪ್ರತಿಕ್ರಿಯೆ ನೀಡಿದ ಮಾಜಿ ಸಿಎಂ ಸಿದ್ದರಾಮಯ್ಯ ಮಗ ಶಾಸಕ ಯತೀಂದ್ರ ಅವರು, ನನ್ನ ತಂದೆ ಎಲ್ಲೇ ನಿಂತರೂ ಗೆಲ್ಲುತ್ತಾರೆ ಎಂದು ಹೇಳಿದ್ದಾರೆ. ಈ ಕುರಿತು ಮಾತಾಡಿದ ಶಾಸಕ ಯತೀಂದ್ರ ಸಿದ್ದರಾಮಯ್ಯ, ಈ ಬಗ್ಗೆ ಹೈಕಮಾಂಡ್ ಏನು ಹೇಳಿದೆ ಎಂದು ನನಗೆ ಗೊತ್ತಿಲ್ಲ. ಇದರ ಬಗ್ಗೆ ತಂದೆಯವರೇ ಸ್ಪಷ್ಟನೆ ನೀಡಬೇಕು. ನಮ್ಮ ತಂದೆ ಯಾವ ಕ್ಷೇತ್ರದಲ್ಲಿ ನಿಂತರೂ ಗೆಲ್ಲುತ್ತಾರೆ. ಕೋಲಾರ ಕ್ಷೇತ್ರದಲ್ಲೂ ಸಿದ್ದರಾಮಯ್ಯ ಗೆದ್ದೆ ಗೆಲ್ಲುತ್ತಾರೆ. ವರುಣ, ಬಾದಾಮಿ, ಚಾಮುಂಡೇಶ್ವರಿ ಕ್ಷೇತ್ರದಲ್ಲೂ ಅದೇ ಆಗುತ್ತದೆ ಎಂದು ಭವಿಷ್ಯ ನುಡಿದರು. ಸಿದ್ದರಾಮಯ್ಯ ವಿರುದ್ಧ ವಿರೋಧಿಗಳು ಒಂದಾಗುತ್ತಾರೆ. ತಂದೆ ಬೆಂಗಳೂರಿಗೆ ಬಂದ ತಕ್ಷಣ ಮಾತನಾಡುತ್ತೇನೆ. ವರುಣ ಕ್ಷೇತ್ರಕ್ಕೆ ಸಿದ್ದರಾಮಯ್ಯ ಬಂದರೆ ಕ್ಷೇತ್ರ ಬಿಟ್ಟುಕೊಡಲು ಸಿದ್ಧನಿದ್ದೇನೆ ಎಂದು ಮತ್ತೊಮ್ಮೆ ಪುನರುಚ್ಚರಿಸಿದರು.

## ಶಾಸಕರಿಗೆ ಹಣ ನೀಡುವ ಮೂಲಕ ದೆಹಲಿ ಸರ್ಕಾರ ಉರುಳಿಸಲು ಬಿಜೆಪಿ ಪ್ರಯತ್ನ

ನವದೆಹಲಿ: ದೆಹಲಿ ವಿಧಾನಸಭೆಯಲ್ಲಿ ಕೇವಲ ಎಂಟು ಶಾಸಕರನ್ನು ಹೊಂದಿರುವ ಬಿಜೆಪಿ, ಅವಿಶ್ವಾಸ ನಿರ್ಣಯದ ನೆಪದಲ್ಲಿ ಶಾಸಕರಿಗೆ ಹಣ ನೀಡುವ ಮೂಲಕ ಅರವಿಂದ್ ಕೇಜ್ರಿವಾಲ್ ಸರ್ಕಾರವನ್ನು ಉರುಳಿಸಲು ಪ್ರಯತ್ನಿಸುತ್ತಿದೆ ಎಂದು ಆಮ್ ಆದ್ಮಿ ಪಕ್ಷ (ಎಎಪಿ) ಆರೋಪಿಸಿದೆ.

ಇಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಎಎಪಿಯ ರಾಜ್ಯಸಭಾ ಸಂಸದ ರಾಘವ್ ಚಡ್ಡಾ, 'ಭಾರತೀಯ ಜನತಾ ಪಕ್ಷ (ಬಿಜೆಪಿ) ತನ್ನ ಪಕ್ಷದ ಶಾಸಕರಿಗೆ ಎರಡು ಆಯ್ಕೆಗಳನ್ನು ನೀಡುತ್ತಿದೆ. ಒಂದು ಅವರು ಕೇಸರಿ ಪಕ್ಷಕ್ಕೆ ಸೇರಬೇಕು ಅಥವಾ ಸಿಬಿಐ-ಇಡಿ ಅವರನ್ನು ಜೈಲಿಗೆ ಹಾಕುತ್ತದೆ' ಎಂದು ಆರೋಪಿಸಿದರು.

ದೆಹಲಿ ವಿಧಾನಸಭೆಯ ನಡೆಯುತ್ತಿರುವ ಅಧಿವೇಶನದಲ್ಲಿ ಕೇಜ್ರಿವಾಲ್ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಬಿಜೆಪಿ ಯೋಜಿಸುತ್ತಿದೆ.

ಎಎಪಿ 62 ಶಾಸಕರನ್ನು ಹೊಂದಿದ್ದು, ಬಿಜೆಪಿಯು ಎಂಟು ಶಾಸಕರನ್ನು ಹೊಂದಿದೆ. ಆದರೆ, ಬಿಜೆಪಿಯು ಮಧ್ಯಪ್ರದೇಶ ಮತ್ತು ಮಹಾರಾಷ್ಟ್ರದಲ್ಲಿ ಸರ್ಕಾರಗಳು ಬಿದ್ದಂತೆ ಬೀಳಿಸಲು ಅವಿಶ್ವಾಸ ನಿರ್ಣಯದ ನೆಪದಲ್ಲಿ ಶಾಸಕರನ್ನು ಖರೀದಿಸುವ ಮೂಲಕ ಸರ್ಕಾರವನ್ನು ಬೀಳಿಸಲು ಬಯಸುತ್ತಿದೆ ಎಂದು



ಹೇಳಿದರು.

ದೆಹಲಿಯಲ್ಲಿ ಚುನಾವಣೆ ನಂತರ ಬಿಜೆಪಿ ಸೋಲುತ್ತಿದ್ದು, ಈಗ ನಮ್ಮ ಶಾಸಕರಿಗೆ 'ನಿಮ್ಮ ಉಪಮುಖ್ಯಮಂತ್ರಿಗೆ ನಾವು ಆ ರೀತಿ ಮಾಡಿದ್ದೀವಿ. ಆದರೆ, ನೀವು ಬರೀ ಎಂಎಲ್ಎ ಅಷ್ಟೇ' ಎಂದು ಬೆದರಿಕೆ ಹಾಕುತ್ತಿದ್ದಾರೆ. ಬಿಜೆಪಿ ತನ್ನ ನೀಚ ಪ್ರಯತ್ನಗಳನ್ನು ನಿಲ್ಲಿಸಬೇಕು. ಅವರು ಅನೇಕ ಬಾರಿ ಪ್ರಯತ್ನಿಸಿದರು. ಆದರೆ, ನಮ್ಮ ಶಾಸಕರನ್ನು ಸೆಳೆಯಲು ಸಾಧ್ಯವಾಗಲಿಲ್ಲ' ಎಂದು ಆರೋಪಿಸಿದ್ದಾರೆ.

'ಭ್ರಷ್ಟಾಚಾರ'ದಲ್ಲಿ ಭಾಗಿಯಾಗಿರುವ ಎಎಪಿ ಸರ್ಕಾರದ ವಿರುದ್ಧ ಬಿಜೆಪಿ ಅವಿಶ್ವಾಸ ನಿರ್ಣಯ ಮಂಡಿಸಲಿದೆ ಎಂದು ವಿರೋಧ ಪಕ್ಷದ ನಾಯಕ ರಾಮವೀರ್ ಸಿಂಗ್ ಬಿಧುರಿ ಹೇಳಿದ್ದಾರೆ.

2021-22ರ ಅವಧಿಯ ಈಗ ರದ್ದುಗೊಂಡಿರುವ ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಸದ್ಯ ಜೈಲಿನಲ್ಲಿರುವ ಎಎಪಿ ಮತ್ತು ದೆಹಲಿಯ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ವಿರುದ್ಧ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡಿದೆ ಎಂದು ಚಡ್ಡಾ ಬಿಜೆಪಿ ನೇತೃತ್ವದ ಕೇಂದ್ರವನ್ನು ಟೀಕಿಸಿದರು.

ಕಾಶ್ಮೀರದಲ್ಲಿ ವಾಸಿಸುತ್ತಿರುವ ಬಿಜೆಪಿ ಕಾರ್ಯಕರ್ತ ಕಿರಣ್ ಪಟೇಲ್ ಅವರು ಪ್ರಧಾನ ಮಂತ್ರಿ ಕಚೇರಿಯ (ಪಿಎಂಒ) ಹೆಚ್ಚುವರಿ ನಿರ್ದೇಶಕರಾಗಿದ್ದಾರೆ. ಅವರಿಗೆ 'ಝಡ್-ಪ್ಲಸ್' ಭದ್ರತೆ ನೀಡಲಾಗುತ್ತಿದೆ. ಎರಡು ಜಾಮರ್ ವಾಹನಗಳು, 50 ಗನ್‌ಮೆನ್‌ಗಳು, ಪಂಚತಾರಾ ಹೋಟೆಲ್‌ನಲ್ಲಿ ತಂಗುತ್ತಾರೆ. ಅವರು ಬಿಜೆಪಿ ಕಾರ್ಯಕರ್ತ ಎಂಬ ಕಾರಣಕ್ಕೆ ತನಿಖಾ ಸಂಸ್ಥೆಗಳು ತನಿಖೆ ನಡೆಸುತ್ತಿಲ್ಲ. ಆದರೆ, ಸಿಸೋಡಿಯಾ ಅವರನ್ನು ಜೈಲಿಗೆ ಹಾಕಿದ್ದಾರೆ ಎಂದರು.

ಕೇಂದ್ರದಲ್ಲಿ 'ಹೆಚ್ಚುವರಿ ಕಾರ್ಯದರ್ಶಿ' ಎಂದು ಹೇಳಿಕೊಂಡು ಭದ್ರತೆಯನ್ನು ಅನುಭವಿಸಿದ್ದಕ್ಕಾಗಿ ಗುಜರಾತಿನ ಪಟೇಲ್ ಅವರನ್ನು ಶ್ರೀನಗರದ ಪಂಚತಾರಾ ಹೋಟೆಲ್‌ನಿಂದ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಇತ್ತೀಚೆಗೆ ಬಂಧಿಸಿದ್ದಾರೆ.

## ಗಗನಸಖಿ ಸಾವು ಪ್ರಕರಣ: ಕೊನೆಗೂ ತಪ್ಪೊಪ್ಪಿಕೊಂಡ ಪ್ರಿಯಕರ



ಬೆಂಗಳೂರು: ಪ್ರಿಯಕರನನ್ನು ಭೇಟಿಯಾಗಲು ಬಂದಿದ್ದ ಗಗನಸಖಿ ಅಪಾರ್ಟ್‌ಮೆಂಟ್‌ನ ನಾಲ್ಕನೇ ಮಹಡಿಯಿಂದ ಬಿದ್ದು ಅನುಮಾನಾಸ್ಪದವಾಗಿ ಮೃತಪಟ್ಟ ಪ್ರಕರಣ ಇದೀಗ ತಾರ್ಕಿಕ ಅಂತ್ಯ ಕಾಣವ ಹಂತಕ್ಕೆ ಬಂದಿದೆ.

ಇದುವರೆಗೂ ಪ್ರಕರಣ ನಿಗೂಢವಾಗಿತ್ತು. ಆದರೆ, ಇದೀಗ ಗಗನಸಖಿಯ ಬಾಯ್ಫ್ರೆಂಡ್ ತಪ್ಪೊಪ್ಪಿಕೊಂಡಿದ್ದು, ಆತ್ಮಹತ್ಯೆ ಎಂದು ಶಂಕಿಸಲಾಗಿದ್ದ ಪ್ರಕರಣ ಇದೀಗ ಕೊಲೆ ಪ್ರಕರಣವಾಗಿ ತಿರುವು ಪಡೆದುಕೊಂಡಿದೆ.

ಹಿಮಾಚಲಪ್ರದೇಶ ಮೂಲದ ಅರ್ಚನಾ ಧೀಮನ್ (28) ಮೃತ ಗಗನಸಖಿ. ಕೋರಮಂಗಲದ 8ನೇ ಬ್ಲಾಕ್‌ನ ರೇಣುಕಾ ರೆಸಿಡೆನ್ಸಿ ಅಪಾರ್ಟ್‌ಮೆಂಟ್‌ನ ತಾನು ವಾಸವಿದ್ದ ಬಾಲ್ಕನಿಯಿಂದ ಬಿದ್ದು ಅರ್ಚನಾ ಮೃತಪಟ್ಟಿದ್ದಳು. ಆರಂಭದಲ್ಲಿ ಆತ್ಮಹತ್ಯೆ ಎಂದು ಶಂಕಿಸಲಾಗಿತ್ತು. ಸಾವಿಗೀಡಾದ ದಿನ ಅರ್ಚನಾಳ ಬಾಯ್ಫ್ರೆಂಡ್ ಸುಳಿವು ಸಿಕ್ಕಿದ್ದರಿಂದ ಆತ್ಮಹತ್ಯೆ ಪ್ರಕರಣ ಅನುಮಾನಾಸ್ಪದಾ ಪ್ರಕರಣಕ್ಕೆ ತಿರುಗಿತ್ತು.

ಅರ್ಚನಾ ಬಾಯ್ಫ್ರೆಂಡ್ ಆದೇಶ್ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆಕೆಯನ್ನು ಬಾಲ್ಕನಿಯಿಂದ ತಳ್ಳಿ ಕೊಲೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಮದುವೆ ಆಗಲು ಒಪ್ಪದಿದ್ದರೆ ಲೈಗಿಂಕ ದೌರ್ಜನ್ಯ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸುತ್ತೇನೆ ಎಂದು ಅರ್ಚನಾ ಬೆದರಿಕೆ ಹಾಕಿದ್ದಳು.

ಮೃತಪಟ್ಟ ದಿನವೂ ಕೂಡ ಇದೇ ಬೆದರಿಕೆ ಮುಂದುವರಿಸಿದ್ದಳು. ಇದರಿಂದ ಇಬ್ಬರ ನಡುವೆ ವಾಗ್ವಾದ ನಡೆಯಿತು. ಅಂತಿಮವಾಗಿ ಆಕೆಯನ್ನು ಬಾಲ್ಕನಿಯಿಂದ ತಳ್ಳಿ ಕೊಲೆ ಮಾಡಿದೆ ಎಂದು ಆದೇಶ್ ತಪ್ಪೊಪ್ಪಿಕೊಂಡಿದ್ದಾನೆ.

## ಸಾಗರ ಪರಿಕ್ರಮ 4: ಉತ್ತರ ಕನ್ನಡ ಜಿಲ್ಲೆ ಮಾಜಾಳಿ ಕಡಲತೀರಕ್ಕೆ ಕೇಂದ್ರ ಸಚಿವ ರೂಪಾಲಾ, ಮುರುಗನ್ ಭೇಟಿ

ಕಾರವಾರ: ಮೀನುಗಾರಿಕೆ, ಮೀನುಗಾರಿಕೆ ಮಾರುಕಟ್ಟೆ ಹಾಗೂ ಮೀನುಗಾರರ ಸರ್ವತೋಮುಖ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರವು ಪ್ರಾಥಮಿಕ ಹಂತದಿಂದಲೇ ಕ್ರಮವಹಿಸಿದೆ ಎಂದು ಕೇಂದ್ರ ಮೀನುಗಾರಿಕೆ ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ಪರಷೋತ್ತಮ ರುಪಾಲಾ ಹೇಳಿದ್ದಾರೆ.

ಉತ್ತರಕನ್ನಡ ಜಿಲ್ಲೆಯ ಕಾರವಾರದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದಲ್ಲಿ ಆಯೋಜಿಸಲಾಗಿದ್ದ, ಸಾಗರ ಪರಿಕ್ರಮ 2023 ನಾಲ್ಕನೇ ಹಂತ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮೀನುಗಾರಿಕೆಯನ್ನು ಅಭಿವೃದ್ಧಿಪಡಿಸಿ ಮೀನುಗಾರರ ಬದುಕು




ಆರ್ಥಿಕವಾಗಿ ಉತ್ತಮಗೊಳಿಸುವುದು ಕೇಂದ್ರ ಸರ್ಕಾರದ ಮುಖ್ಯ ಧ್ಯೇಯವಾಗಿದೆ. ಇದಕ್ಕಾಗಿಯೇ ಸರ್ಕಾರವು ನೀಲಿ ಕ್ರಾಂತಿಯನ್ನು ಜಾರಿಗೊಳಿಸಿ 6 ಸಾವಿರ ಕೋಟಿ ಅನುದಾನ ಘೋಷಣೆ ಮಾಡಿದೆ ಎಂದರು.

ಮೀನುಗಾರರಿಗೆ ಇನ್ನಷ್ಟು ಸೌಲಭ್ಯ ನೀಡುವ ನಿಟ್ಟಿನಲ್ಲಿ ಮತ್ಸ್ಯ ಸಂಪದ ಯೋಜನೆಯನ್ನು ಜಾರಿಗೊಳಿಸಿದೆ. ಹಾಗೆಯೇ ಕೇವಲ ಕೃಷಿಕರಿಗೆ ಮಾತ್ರ ನೀಡಲಾಗುತ್ತಿದ್ದ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯನ್ನು ಇಂದು ಮೀನುಗಾರರಿಗೂ ವಿಸ್ತರಿಸಲಾಗಿದೆ. ಈ ಯೋಜನೆಯಿಂದ ಮೀನುಗಾರರು ಒಂದು ಲಕ್ಷ ದಿಂದ 1.5 ಲಕ್ಷದವರೆಗೆ ಯಾವುದೇ ಭದ್ರತೆ ಇಲ್ಲದೆ ಬ್ಯಾಂಕುಗಳಿಂದ ಸಾಲವನ್ನು ಪಡೆಯಬಹುದಾಗಿದೆ ಎಂದರು. ವಿಶೇಷವಾಗಿ ಕರ್ನಾಟಕವು ಮೀನುಗಾರಿಕೆಗೆ ತನಗೆ ಆದ ಕೊಡುಗೆ ನೀಡಿದೆ ಎಂದು ತಿಳಿಸಿದರು.

ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ, ಹೈನುಗಾರಿಕೆ ಹಾಗೂ ಮಾಹಿತಿ ಹಾಗೂ ಪ್ರಸಾರ ರಾಜ್ಯ ಸಚಿವ ಡಾ. ಎಲ್. ಮುರುಗನ್ ಮಾತನಾಡಿ, ಸಾಗರ ಪರಿಕ್ರಮ ಕೇಂದ್ರ ಸಚಿವರು ನೇರವಾಗಿ ಮೀನುಗಾರರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಆಲಿಸಿ, ಅವರಿಗೋಸ್ಕರ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳನ್ನು ಮನವರಿಕೆ ಮಾಡಿಕೊಡುವ ಕಾರ್ಯಕ್ರಮವಾಗಿದೆ. ಸರ್ಕಾರವು ದೇಶದ ನಾನಾ ಭಾಗಗಳಲ್ಲಿ ಆಧುನಿಕ ಮೀನುಗಾರಿಕೆ ಮಾರುಕಟ್ಟೆ, ಕೋಲ್ಡ್ ಸ್ಟೋರೇಜ್ ಹಾಗೂ ಬಂದರುಗಳನ್ನು ನಿರ್ಮಾಣ ಮಾಡಲು ಹೊರಟಿದೆ ಎಂದರು.

ಇದೇ ಸಂದರ್ಭದಲ್ಲಿ ಮತ್ಸ್ಯ ಸಂಪದ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಹಾಗೂ ಕಿಸಾನ್ ಕ್ರೆಡಿಟ್ ಕಾರ್ಡಗಳನ್ನು ಸಚಿವರು ವಿತರಿಸಿದರು. ರಾಜ್ಯ ಮೀನುಗಾರಿಕೆ ಸಚಿವ ಅಂಗಾರ, ಶಾಸಕಿ ರೂಪಾಲಿ ನಾಯ್ಕ ಮತ್ತಿತರರು ಪಾಲ್ಗೊಂಡರು.

# ಜಿಲ್ಲೆಯ ಎಲ್ಲಾ ಕ್ಷೇತ್ರಗಳಲ್ಲಿ ಕೆಆರ್‌ಎಸ್ ಅಭ್ಯರ್ಥಿಗಳು ಕಣಕ್ಕೆ: ಡಾ.ಮಂಜುನಾಥ್



ಬಳ್ಳಾರಿ: ಈ ಬಾರಿ ಏಪ್ರಿಲ್–ಮೇ ಮಾಹೆಯಲ್ಲಿ ನಡೆಯಲಿರುವ ಕರ್ನಾಟಕ ವಿಧಾನಸಭೆ ಚುನಾವಣೆಗೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷವು ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕೆ ನಿಲ್ಲಿಸಲಿದೆ ಎಂದು ಕೆಆರ್‌ಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಡಾ.ಮಂಜುನಾಥ್ ತಿಳಿಸಿದ್ದಾರೆ.

ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದಿಂದ ಕಾಪು ಶ್ರೀನಿವಾಸ ರೆಡ್ಡಿ, ಗ್ರಾಮೀಣ ಕ್ಷೇತ್ರದಿಂದ ಕಾವಲಿ ಮಾರೆಣ್ಣ, ಸಿರುಗುಪ್ಪ ಕ್ಷೇತ್ರದಿಂದ ದೊಡ್ಡ ಯಲ್ಲಪ್ಪ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ. ಸಂಡೂರು ವಿಧಾನಸಭಾ ಕ್ಷೇತ್ರದಿಂದ ಮಹಿಳಾ ಅಭ್ಯರ್ಥಿಯನ್ನು ನಿಲ್ಲಿಸಲು ಉದ್ದೇಶಿಸಲಾಗಿದೆ. ಉಳಿದ ಕ್ಷೇತ್ರದಲ್ಲಿ ಅಭ್ಯರ್ಥಿಯ ಹುಡುಕಾಟ ನಡೆದಿದೆ ಎಂದರು. ಪ್ರಾದೇಶಿಕ, ಪ್ರಾಮಾಣಿಕ, ಜನಪರ ರಾಜಕಾರಣಕ್ಕಾಗಿ ನಾಡಿನ ಜನರು ಹಂಬಲಿಸಿದ್ದು, ತಮ್ಮ ಪಕ್ಷವು ಕೂಡ ಎಲ್ಲ ಸಿದ್ಧತೆಗಳೊಂದಿಗೆ ಜನರ ಆಶಯದಂತೆಯೇ ಚುನಾವಣೆ ಎದುರಿಸಲಿದೆ. ಸ್ವಚ್ಛ, ಸದೃಢ, ಸಮೃದ್ಧ, ಸಾಂಸ್ಕೃತಿಕ, ಹಸಿರು ಕರ್ನಾಟಕಕ್ಕಾಗಿ ಕೆಆರ್‌ಎಸ್ ಪಕ್ಷ ನವಸೂತ್ರಗಳನ್ನು ರೂಪಿಸಿದೆ. ಲಂಚ ಮುಕ್ತ ಕರ್ನಾಟಕ, ದಕ್ಷ ಆಡಳಿತ ನೀಡಲು ಬಲಿಷ್ಠ ಲೋಕಾಯುಕ್ತ ತರುವುದು, ಖಾಲಿ ಹುದ್ದೆಗಳ ಭರ್ತಿ, ದಕ್ಷ ಮತ್ತು ಪ್ರಾಮಾಣಿಕ ಆಡಳಿತ, ಕಂದಾಯ ದಾಖಲೆಗಳನ್ನು ಸ್ವಚ್ಛವಾಗಿಡುವುದು, ಪೋಡಿ ಮುಕ್ತ ಗ್ರಾಮ, ಸರ್ವೆ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಿ ಕಾಗದ ರಹಿತ ಆಡಳಿತ, ಬ್ರೋಕರ್ ಮುಕ್ತ ಸೇವೆಗಳು, ಪೊಲೀಸ್ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆ, ರೌಡಿ ಶೀಟರ್ ಪಟ್ಟಿ ಪರಿಷ್ಕರಣೆ, ಸುಳ್ಳು ಪ್ರಕರಣಗಳನ್ನು ವಾಪಸ್ಸು ಪಡೆಯುವುದು, ಪ್ರಾಮಾಣಿಕ ಮತ್ತು ದಕ್ಷ ಸರ್ಕಾರಿ ನೌಕರರು ಘನತೆಯಿಂದ ಕೆಲಸ ನಿರ್ವಹಿಸುವ ವಾತಾವರಣ ನಿರ್ಮಿಸುವುದು, ಆರೋಗ್ಯ, ಶಿಕ್ಷಣ, ಕೃಷಿಯಲ್ಲಿ ಅಮೂಲಾಗ್ರ ಬದಲಾವಣೆ ತುರುವುದು ತಮ್ಮ ಪಕ್ಷದ ಪ್ರಮುಖ ಅಜೆಂಡಾವಾಗಿದೆ.

ಶಾಶ್ವತ ಆವರ್ತ ನಿಧಿ ಸ್ಥಾಪಿಸಿ ಜೀವನಾವಶ್ಯಕ ವಸ್ತುಗಳ ಬೆಲೆಗಳನ್ನು ನಿಗದಿಗೊಳಿಸುವುದು, ಮಹಿಳೆ ಮತ್ತು ಕುಟುಂಬ ಕಲ್ಯಾಣ, ಯುವಜನತೆಗೆ ಉದ್ಯೋಗ ನೀಡುವುದು, ಪ್ರಾದೇಶಿಕತೆಗೆ ಒತ್ತು ನೀಡಲು ಕಲೆ, ಭಾಷೆ ಮತ್ತು ಸಾಹಿತ್ಯಕ್ಕೆ ಒತ್ತು ನೀಡುವುದು, ಪರಿಸರ ಮತ್ತು ಸುಸ್ಥಿರ ಅಭಿವೃದ್ಧಿ, ಮರಳು ನೀತಿ ಪರಿಷ್ಕರಣೆ, ಟೋಲ್ ಸಂಗ್ರಹಕ್ಕೆ ಮುಕ್ತಿ, ಬಸ್ ಟಿಕೆಟ್ ದರ ಕಡಿತ, ವಿದ್ಯುತ್ ದರ ಇಳಿಕೆ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಉದ್ದಿಮೆ ಮತ್ತು ಸಂಘಟಿತ, ಅಸಂಘಟಿತ ಕಾರ್ಮಿಕರ ಕಲ್ಯಾಣ ತಮ್ಮ ಪಕ್ಷದ ಪ್ರಮುಖ ಪ್ರಣಾಳಿಕೆಗಳಾಗಿವೆ. ಈ ಕಾರಣದಿಂದ ನಾಡಿನ ಜನತೆ ಕೆಆರ್‌ಎಸ್ ಪಕ್ಷವನ್ನು ಬೆಂಬಲಿಸಿ ತಮ್ಮ ಅಭ್ಯರ್ಥಿಗಳಿಗೆ ಮತ ಹಾಕಬೇಕೆಂದು ಅವರು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಕೆಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷ ಕಾಪು ಶ್ರೀನಿವಾಸ ರೆಡ್ಡಿ, ಅಲ್ಪ ಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಮೊಹಮ್ಮದ್ ಮುಷ್ತಾಫ, ಗ್ರಾಮೀಣ ಕ್ಷೇತ್ರದ ಅಭ್ಯರ್ಥಿ ಕಾವಲಿ ಮಾರೆಣ್ಣ, ಕಂಪ್ಲಿ ಕ್ಷೇತ್ರದ ಅಧ್ಯಕ್ಷ ಪ್ರಕಾಶ್ ರೆಡ್ಡಿ ಇನ್ನಿತರರು ಇದ್ದರು.

# ಮೇಯರ್,ಉಪಮೇಯರ್ ಚುನಾವಣೆ ಮುಂದೂಡಿಕೆ




ಬಳ್ಳಾರಿ: ಬಳ್ಳಾರಿಯ ಮಹಾನಗರ ಪಾಲಿಕೆಯ 21ನೇ ಅವಧಿಯ ಮೇಯರ್, ಉಪಮೇಯರ್ ಮತ್ತು ನಾಲ್ಕು ಸ್ಥಾಯಿ ಸಮಿತಿಗಳ ಚುನಾವಣೆಯನ್ನು ಈ ತಿಂಗಳ 21 ರಂದು ನಡೆಸಲು ನಿರ್ಧರಿಸಿತ್ತು. ಆದರೆ ತಾತ್ಕಾಲಿಕವಾಗಿ ಮುಂದೂಡಿ ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಈ ಕುರಿತು ಪಾಲಿಕೆ ಆಯುಕ್ತರಿಗೆ ಪತ್ರ ಬರೆದಿರುವ ಪ್ರಾದೇಶಿಕ ಆಯುಕ್ತರು. ನೀವು ತಿಳಿಸಿದಂತೆ 43 ಮತದಾರರ ಪಟ್ಟಿ ಸಿದ್ದಪಡಿಸಿ ನೀಡಿತ್ತು. ತದನಂತರ 13/03/2023ರ ನಿಮ್ಮ ಪತ್ರದನ್ವಯ ಪ್ರಸ್ತುತ ವಿಧಾನಸಭಾ ಸಾರ್ವತ್ರಿಕ ಚುನಾವಣೆ ಘೋಷಣೆಯಾಗಲಿರುವ ಹಿನ್ನೆಲೆಯಲ್ಲಿ ಎಲ್ಲಾ ಸಿಬ್ಬಂದಿಗಳು ಚುನಾವಣಾ ಸಿದ್ಧತಾ ಕರ್ತವ್ಯದಲ್ಲಿ ನಿರತರಾಗಿರುವುದರಿಂದ, ಈ ಚುನಾವಣೆಯನ್ನು ಮುಂದೂಡಲ್ಪಟ್ಟಿದೆ.

ಅಲ್ಲದೆ ದಿನಾಂಕ 18.03.2023ರ ಪತ್ರದನ್ವಯ ಬಳ್ಳಾರಿ ನಗರದ ವಿಧಾನ ಪರಿಷತ್ ಸದಸ್ಯ ಸತೀಶ್ ವೈ.ಎಂ., ಇವರ ಹೆಸರು 94 ಬಳ್ಳಾರಿ ವಿಧಾನಸಭಾ ಮತಕ್ಷೇತ್ರದ ಭಾಗ ಸಂಖ್ಯೆ: 193ರ ಕ್ರಮ ಸಂಖ್ಯೆ 331ರಲ್ಲಿ ಸೇರ್ಪಡೆಯಾಗಿದ್ದು, ಇವರಿಗೂ ಸಹ ಚುನಾವಣಾ ನೋಟೀಸನ್ನು ಜಾರಿಗೊಳಿಸಲು ಕೋರಿದ್ದು, ತಮ್ಮಿಂದ ಈ ಹಿಂದೆ ಸಲ್ಲಿಸಲಾದ ಮತದಾರರ ಪಟ್ಟಿಯ ಲೋಪವನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಕರ್ನಾಟಕ ನಗರ ಪಾಲಿಕೆ ಕಾಯ್ದೆಯ ಪ್ರಕಾರ ಸಭೆಯ ಸೂಚನಾ ಪತ್ರವನ್ನು ಕನಿಷ್ಠ 07 (ಏಳು) ದಿನಗಳ ಮುಂಚಿತವಾಗಿ ಜಾರಿಗೊಳಿಸಬೇಕಾಗಿರುತ್ತದೆ. ಇದರಿಂದ, ಅರ್ಹ ಮತದಾರರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರಗುಳಿಯಬಾರದೆಂಬ ಸದುದ್ದೇಶದಿಂದ ಈ ಚುನಾವಣೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದ್ದು, ಇದನ್ನು ಸಂಬಂಧಪಟ್ಟ ಎಲ್ಲಾ ಸದಸ್ಯರ ಹಾಗೂ ಅಧಿಕಾರಿಗಳ ಗಮನಕ್ಕೆ ತರಲು ನಿರ್ದೇಶಿಸಿದೆ ಎಂದು ಪಾಲಿಕೆ ಆಯುಕ್ತರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದೆ.

## ಆರ್.ವೈ.ಎಂ.ಇ.ಸಿಯ ಹನುಮಂತರಾವ್ ಅಂಬರ್‌ಕರ್ ಅವರಿಗೆ ಡಾಕ್ಟರೇಟ್ ಪದವಿ ಪ್ರಧಾನ



ಬಳ್ಳಾರಿ : ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ವಿದ್ಯೂತ್ ಮತ್ತು ವಿದ್ಯುನ್ಮಾನ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಆಗಿ ಕಾರ್ಯನಿರ್ವಹಿಸುತ್ತಿರುವ ಹನುಮಂತರಾವ್ ಅಂಬರ್‌ಕರ್ ಇವರಿಗೆ, ಮೇವಾಡ್ ವಿಶ್ವವಿದ್ಯಾಲಯ,(ಗಂಗ್ರಾರ, ಚಿತ್ತೋಡಘಡ, ರಾಜಸ್ತಾನ್) ನಿಂದ ಡಾ॥ ಕೆ.ವಿಜಯಭಾಸ್ಕರ ರೆಡ್ಡಿ, (ಪ್ರೊಫೆಸರ್,ಬಿ.ವಿ.ರಾಜು ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ,ನರ್ಸಾಪುರ್, ಹೈದರಾಬಾದ್,)ಇವರ ಮಾರ್ಗದರ್ಶನದಲ್ಲಿ ಡಾಕ್ಟರೇಟ್ ಪದವಿ ದೊರೆತಿದೆ. ಹನುಮಂತರಾವ್ ಅಂಬರ್‌ಕರ್ ರವರು " ಪ್ರಾಬಬಿಲಿಸ್ಟಿಕ್ ಆಪ್ಟಿಮಲ್ ಪವರ್‌ಫ್ಲೋ ಆಫ್ ಕರ್ನಾಟಕ ಪವರ್ ಗ್ರಿಡ್ ಇನ್ ಕಾರ್ಪೊರೇಟಿಂಗ್ ಫ್ಲೇಗ್ಜಿಬಿಲ್ ಏಸಿ ಟ್ರಾನ್ಸ್ ಮಿಸನ್ ಸಿಸ್ಟಮ್ಸ್" ಎಂಬ ವಿಷಯದ ಮೇಲೆ ಮಂಡಿಸಿದ ಸಂಶೋಧನಾ ಪ್ರಭಂಧಕ್ಕೆ ಡಾಕ್ಟರೇಟ್ ಪದವಿಯನ್ನು ನೀಡಲಾಗಿದೆ.

# ಗಣಿಬಾಧಿತ ಪ್ರದೇಶಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕೆ ನಿಲ್ಲಿಸುವಂತೆ ಕೆಆರ್‌ಪಿಪಿ ಸಂಸ್ಥಾಪಕರಿಗೆ ಒತ್ತಾಯ



ಬಳ್ಳಾರಿ: ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ವತಿಯಿಂದ ಈಬಾರಿಯ ಕರ್ನಾಟಕ ವಿಧಾನ ಸಭೆಗೆ ಗಣಿಬಾಧಿತ 10 ಕ್ಷೇತ್ರಗಳಿಂದ ಕೆಆರ್‌ಪಿಪಿ ಅಭ್ಯರ್ಥಿಗಳನ್ನು ಪಕ್ಷ ಘೋಷಿಸಲು ಒತ್ತಾಯಿಸಿ ಧರಣಿ ಸತ್ಯಾಗ್ರಹ ಹಮ್ಮಿಕೊಂಡಿರುವುದಾಗಿ ಮಹಾತ್ಮಗಾಂಧಿ ವಿವಿದೋದ್ದೇಶ ಸಹಕಾರ ಸಂಘ ನಿಯಮಿತ ಸಂಸ್ಥಾಪಕ ಹೆಚ್.ಎಂ.ಶಿವಾನಂದಯ್ಯ ಹೇಳಿದ್ದಾರೆ.

ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತಂತೆ ಸಂಡೂರು, ಹೊಸಪೇಟೆ, ಬಳ್ಳಾರಿ ಗ್ರಾಮೀಣ, ಹಗರಿಬೊಮ್ಮನಹಳ್ಳಿ, ಚಿತ್ರದುರ್ಗ, ಹೊಳಲ್ಕೆರೆ, ಹೊಸದುರ್ಗ, ಚಿಕ್ಕನಾಯಕನಹಳ್ಳಿ, ಗುಬ್ಬಿ, ತಿಪಟೂರು ಈ ಗಣಿಬಾಧಿತ 10 ವಿಧಾನಸಭೆ ಕ್ಷೇತ್ರಗಳಲ್ಲಿ ಧರಣಿ ಹಮ್ಮಿಕೊಳಲು ನಿರ್ಧರಿಸಿದ್ದು, ಮೊದಲ ಬಾರಿಗೆ ಬಳ್ಳಾರಿಯಲ್ಲಿರುವ ಕೆಆರ್‌ಪಿಪಿ ಕಚೇರಿ ಮುಂದೆ ತಮ್ಮ ಕಾರ್ಯಕರ್ತರೊಂದಿಗೆ ಧರಣಿ ಸತ್ಯಾಗ್ರಹ ಹಮ್ಮಿಕೊಂಡು ಅಭ್ಯರ್ಥಿಗಳನ್ನು ಘೋಷಿಸಲು ಒತ್ತಾಯಿಸುತ್ತೇವೆ ಎಂದರು.

ಗಣಿಬಾಧಿತ ವಿಧಾನಸಭೆ ಕ್ಷೇತ್ರಗಳಲ್ಲಿ ಗಣಿ ಧೂಳಿನಿಂದಾಗಿ ಜನರು, ಪ್ರಮುಖವಾಗಿ ಮಹಿಳೆಯರ, ಮಕ್ಕಳ ಜೀವನ ನರಕವಾಗಿದೆ.

ಇಂಥವರ ಜೀವನ ಮರುಸ್ಥಾಪನೆಯಾಗಿ ಕಲ್ಯಾಣವಾಗಬೇಕಾಗಿದೆ. ಅದಕ್ಕಾಗಿ ಸುಪ್ರೀಮ್ ಕೋರ್ಟ್ ಘೋಷಿಸಿರುವ ಪರಿಹಾರ ಮೊತ್ತ 30,478 ಸಾವಿರ ಕೋಟಿ ಹಣ ಮತ್ತು ಆದರ ಬಡ್ಡಿ ಹಣವನ್ನು ಜನರ ಕಲ್ಯಾಣಕ್ಕಾಗಿ ವಿನಿಯೋಗಿಸಬೇಕಾಗಿದೆ. ಬಿಜೆಪಿ, ಕಾಂಗ್ರೆಸ್, ಜನತಾದಳಗಳ ಸಮಿಶ್ರ ಸರ್ಕಾರ ನಡೆಸಿದವರೆಲ್ಲರೂ ಗಣಿ ಉಕ್ಕು ಉದ್ಯಮಿಗಳ, ಪ್ರಮುಖವಾಗಿ ಜೆ.ಎಸ್. ಡಬ್ಲೂನ ದಲ್ಲಾಳಿಗಳಾಗಿದ್ದು, ಅವರೆಲ್ಲರೂ ಸೇರಿ ಈ ಆರ್ & ಆರ್ ಹಣ ತಿಂದು ತೇಗಲು ಹೊರಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜನಕಲ್ಯಾಣಕ್ಕಾಗಿ ಕಳೆದ ಹಲವಾರು ವರ್ಷಗಳಿಂದ ಹೋರಾಟ ಮಾಡಿಕೊಂಡು ಬಂದಿರುವ ನನಗೆ ನಕ್ಸಲ್ ಎಂಬ ಹಣೆಪಟ್ಟಿ ಕಟ್ಟಿದ್ದಾರೆ. ಒಂದು ಲಕ್ಷ ಯುವಕ, ಯುವತಿಯರು ಈ ಉದ್ಯಮಗಳಲ್ಲಿ ಗುಲಾಮರಾಗಿ ದುಡಿಯುತ್ತಲೇ ಇರಲಿ ಎಂದು ರಾಜಕಾರಣಿಗಳು ಸಮಯ ಕಳೆಯುತ್ತಿದ್ದಾರೆ. ನ್ಯಾಯಾಂಗ ವ್ಯವಸ್ಥೆ ವೃಥಾ ಸಮಯವನ್ನು ಕಳೆಯುತ್ತಿದೆ. ಈ ಗಣಿಬಾಧಿತ ಜನರಿಗೆ ನ್ಯಾಯ ದೊರಕಿಸಿಕೊಡಲು ಕೆ ಆರ್‌ಪಿಪಿ ಪಕ್ಷದ ಶಾಸಕರಿಂದ ಸಾಧ್ಯ. ಹೀಗಾಗಿ ಜನಾರ್ದನರೆಡ್ಡಿ ಅವರು, ಬಸವಣ್ಣ ಕಲ್ಯಾಣ ರಾಜ್ಯದ ಬುನಾದಿ ಹಾಕಿದಂತೆ ತಮ್ಮ ಪಕ್ಷದಿಂದ ಕಲ್ಯಾಣ ರಾಜ್ಯವನ್ನು ಸ್ಥಾಪಿಸಲುನ ಮುಂದೆ ಬರಬೇಕು.

ಅಭ್ಯರ್ಥಿಗಳನ್ನು ಘೋಷಣೆ ಮಾಡಿದಲ್ಲಿ ಇಲ್ಲಿನ ಮಹಿಳೆಯರೇ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಕಲ್ಯಾಣ ರಾಜ್ಯವನ್ನು ಕಟ್ಟಿಕೊಡಲಿದ್ದಾರೆ ಎಂದರು.ಸುದ್ದಿಗೋಷ್ಠಿಯಲ್ಲಿ ಗಂಗಾಧರ ಮತ್ತು ಪ್ರವೀಣ್ ಜೆ ಇನ್ನಿತರರು ಉಪಸ್ಥಿತರಿದ್ದರು.

# ಯುವಶಕ್ತಿಯ ಮುಂದೆ ಯಾವ ಶಕ್ತಿಯು ನಿಲ್ಲಲಾರದು: ಬಿಷಪ್ ಡಿಸೋಜ



ಬಳ್ಳಾರಿ : ಯುವಕರು ದೇಶದ ಆಸ್ತಿ ಅದನ್ನು ಕಟ್ಟಿ ಬೆಳೆಸುವ ಹೊಣೆ ನಮ್ಮೆಲ್ಲರ ಮೇಲಿದೆ ಅಂತಹ ಕಾರ್ಯವನ್ನು ನೆಹರು ಯುವಕ ಕೇಂದ್ರ ಹಾಗೂ ಲಿಯಾ ಸಂಸ್ಥೆ ಸಹಯೋಗದಲ್ಲಿ ನಗರದ ಆಂತೋನಿ ಹಾಲ್ನಲ್ಲಿ ಕಾರ್ಯಕ್ರಮವನ್ನು ಯುವ ಉತ್ಸವ 2023 ಈ ಕಾರ್ಯಕ್ರಮವನ್ನ ಮಾಡುತ್ತದೆ ಎಂದು ಕಾರ್ಯಕ್ರಮ ಉದ್ಘಾಟಿಸಿದ ನಗರ ಶಾಸಕರಾದ ಸೋಮಶೇಖರ್ ರೆಡ್ಡಿ ಮಾತನಾಡಿದರು.

ನಂತರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಬಿಷಪ್ ಡಿಸೋಜ ಮಾತನಾಡುತ್ತಾ ಸಾಧಕ ಬಾದಕ ನಿಷ್ಪ್ರಯೋಜಕ ಎಂಬ ಮೂರು ವರ್ಗಗಳಿದ್ದು ನಾವೆಲ್ಲರೂ ಸಾಧಕ ವರ್ಗಕ್ಕೆ ಸೇರಿಕೊಳ್ಳೋಣ ಯುವಶಕ್ತಿಯ ಮುಂದೆ ಯಾವ ಶಕ್ತಿಯು ನಿಲ್ಲಲಾರದು ಎಂದು ಮಾತನಾಡಿದರು. ನಂತರ ವೇದಿಕೆ ಕಾರ್ಯಕ್ರಮದಲ್ಲಿ ವೀರಶೇಖರ್ ರೆಡ್ಡಿ ಕೆಎಂಎಫ್ ಅಧ್ಯಕ್ಷರು ಬಳ್ಳಾರಿ, ಶ್ರೀನಿವಾಸ್ ಪೋತ್ನಾರ್ ಸದಸ್ಯರು, ಮಲ್ಲನಗೌಡ ಮಹಾನಗರ ಪಾಲಿಕೆ ಸದಸ್ಯರು, ಶ್ರೀಮತಿ ರಾಜೇಶ್ವರಿ ಸುಬ್ಬರಾಯುಡು, ಅಧ್ಯಕ್ಷರು ಮಹಾನಗರ ಪಾಲಿಕೆ ಖಾದರ್, ಇವನ್ ಪ್ರಿಂಟರ್ ಸಹಾಯಕ ನಿರ್ದೇಶಕರಾದ ಎನ್ವಿಕೆ ಮೌಂಟ್ ಪತ್ತರ್ ಲಿವ ಸಂಶಯ ಅಧ್ಯಕ್ಷರು ಅಬ್ರಹಾಂ ಉಪಸ್ಥಿತರಿದ್ದರು. ಕಾರ್ಯಕ್ರಮ ಕಾರ್ಯಕ್ರಮದ ನಿರೂಪಣೆಯನ್ನು ಸಮಿತಿ ಸುಜಾತ ರೆಡ್ಡಿ ನೆರವೇರಿಸಿದರು.

ವಂದನಾರ್ಪಣೆಯನ್ನು ಗ್ರೇಸ್ ಮಾಡಿದರು. ನಂತರ ಲಿಯ ಸಂಸ್ಥೆಯ ಪದಾಧಿಕಾರಿಗಳು ಮತ್ತು ನೆಹರು ಕೇಂದ್ರದ ಸಾಂಸ್ಥಿಕ ಸಂಚಾಲಕರು ಕೂಡ ಭಾಗವಹಿಸಿದ್ದರು. ತೀರ್ಪುಗಾರರಾಗಿ ಡಾಕ್ಟರ್ ಅಣ್ಣಾಜಿ ಕೃಷ್ಣಾರೆಡ್ಡಿ ಶ್ರೀಮತಿ ಸುಮಾರೆಡ್ಡಿ, ಸಹನಾ ಪಿಂಜರ್,ನರಸಿಂಹಮೂರ್ತಿ ಶ್ಯಾಮೂರ್ತಿ ವೆಂಕೋಬಚಾರಿ ನೇತಿ ರಘುರಾಮ್ ಅವರು ತೀರ್ಪುಗಾರರಾಗಿ ಭಾಗವಹಿಸಿದ್ದರು.

ಬಳ್ಳಾರಿ ಜಿಲ್ಲೆಯ ವಿವಿಧ ಕಾಲೇಜುಗಳು ಮತ್ತು ಸಂಘ ಸಂಸ್ಥೆಗಳಿಂದ ಪೇಂಟಿಂಗ್ ನೃತ್ಯ ಆಶುಭಾಷಣ ಫೋಟೋಗ್ರಾಫಿ ಕವನ ವಾಚನ ಮುಂತಾದ ಸ್ಪರ್ಧೆಗಳಿಗೆ ವಿದ್ಯಾರ್ಥಿಗಳು ಮತ್ತು ಯುವಸಮಹ ಭಾಗವಹಿಸುವ ಮೂಲಕ ಕಾರ್ಯಕ್ರಮದ ಯಶಸ್ವಿಗೆ ಕಾರಣಿ ಕರ್ತರಾದರು ಎಂದು ಸಂಸ್ಥೆಯ ಅಧ್ಯಕ್ಷರಾದ ಅಬ್ರಹಾಮ್ ಅವರು ಪತ್ರಿಕ ಪ್ರಕಟಣೆಗೆ ತಿಳಿಸಿದ್ದಾರೆ.

# ಅಪ್ಪು ಜನ್ಮದಿನದ ಅಂಗವಾಗಿ ರಕ್ತದಾನ ಶಿಬಿರ



ಬಳ್ಳಾರಿ : ಕರ್ನಾಟಕ ರತ್ನ ಅಪ್ಪು ಅವರ ಜನ್ಮದಿನದ ಅಂಗವಾಗಿ ರಕ್ತದಾನ ಶಿಬಿರವನ್ನು ಹಮ್ಮಿಕೊಂಡಿದ್ದು, ಎಲ್ಲರ ಪ್ರೀತಿ ಮತ್ತು ಬೆಂಬಲದಿಂದ ರಕ್ತದಾನ ಶಿಬಿರವನ್ನು ಯಶಸ್ವಿಗೊಳಿಸಲಾಯಿತು. 100ಕ್ಕೂ ಹೆಚ್ಚೂ ರಕ್ತದಾನ ಮಾಡಿ ಅಪ್ಪು ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಿದರು.

ಜಿಲ್ಲಾ ಕ್ರೀಡಾಂಗಣದಲ್ಲಿರುವ ಪುನೀತ್ ರಾಜಕುಮಾರ್ ಪುತ್ಥಳಿಗೆ ಶಾಸಕ ಸೋಮಶೇಖರರೆಡ್ಡಿ ಮಾಲಾರ್ಪಣೆ ಮಾಡಿದರು. ಈ ಸಂಧರ್ಬದಲ್ಲಿ ಬುಡಾ ಅಧ್ಯಕ್ಷ ಮಾರುತಿ ಪ್ರಸಾದ್, ಮಹಾ ನಗರ ಪಾಲಿಕೆ ಸದಸ್ಯರುಗಳು ಶ್ರೀನಿವಾಸ್ ಮೋತ್ಕರ್, ಇಬ್ರಾಹಿಂ ಬಾಬು, ಬಿಜೆಪಿ ನಗರ ಪ್ರದಾನ ಕಾರ್ಯದರ್ಶಿ ಕೆ. ರಮಂಜೇನಿ,ಮುತ್ತು ರಾಜ್ ಅಭಿಮಾನ ಬಳಗ ಮತ್ತಿತರರು ಉಪಸ್ಥಿತರಿದ್ದರು.

## 5 ಕೋಟಿ ವೆಚ್ಚದಲ್ಲಿ ಸಿ.ಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಶಾಸಕ ಮತ್ತು ಮೇಯರ್



ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ ವಾರ್ಡ್ ನಂಬರ್ 34 ರ ವ್ಯಾಪ್ತಿಯ ಬತ್ರಿ ಪ್ರದೇಶದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಸುಮಾರು 5 ಕೋಟಿ ವೆಚ್ಚದಲ್ಲಿ ಸಿ.ಸಿ ರಸ್ತೆ ಕಾಮಗಾರಿಯ ಭೂಮಿ ಪೂಜೆಯನ್ನು ಬಳ್ಳಾರಿ ನಗರದ ಶಾಸಕರಾದ ಸೋಮಶೇಖರ್ ರೆಡ್ಡಿರವರು, ಬಳ್ಳಾರಿ ಮಹಾನಗರ ಪಾಲಿಕೆಯ ಪೂಜ್ಯಮಹಾಪೌರರಾದ ರಾಜೇಶ್ವರಿ ಸುಬ್ಬರಾಯಡು ರವರು ಕಾಮಗಾರಿಯ ಭೂಮಿ ಪೂಜೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರುಗಳು, ಅಧಿಕಾರಿ ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ವರ್ಲ್ಡ್ ವಿಷನ್ ವತಿಯಿಂದ ಪರಿಹಾರ ಶಿಕ್ಷಣ ಕೇಂದ್ರ ಪದವಿ ಕಾರ್ಯಕ್ರಮ



ಬಳ್ಳಾರಿ: ವರ್ಲ್ಡ್ ವಿಷನ್ ಇಂಡಿಯಾ ಎಡಿಪಿ ಬಳ್ಳಾರಿ ವತಿಯಿಂದ ದಿನಾಂಕ 16–3–2023 ರಂದು ಸುಮಾರು 11 (ಖಇಅ) ಪರಿಹಾರ ಶಿಕ್ಷಣ ಕೇಂದ್ರ ಪದವಿ ಕಾರ್ಯಕ್ರಮದ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದರಲ್ಲಿ 11 ಕೇಂದ್ರಗಳಿಂದ ಸುಮಾರು 261 ವಿದ್ಯಾರ್ಥಿಗಳು ಹಾಗೂ 12 ಪರಿಹಾರ ಶಿಕ್ಷಣ ಕೇಂದ್ರದ ಶಿಕ್ಷಕರು ಭಾಗವಹಿಸಿದ್ದರು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ರಯಿಮೂರ್ ರೆಹಮಾನ್ ಕ್ಷೇತ್ರ ಶಿಕ್ಷಣಾಧಿಕಾರಿಗಳು ಬಳ್ಳಾರಿ, ಶ್ರೀಮತಿ ನೀಲಮ್ಮ ಅಧ್ಯಕ್ಷರು ಗ್ರಾ.ಪಂ. ವಣೇನೂರು, ರಾಮಣ್ಣ ಗ್ರಾ ಪಂ ಅಧ್ಯಕ್ಷರು ಮೋಕ, ಸಿದ್ದರಾಮನಗೌಡ ಹಿರಿಯ ಶಿಕ್ಷಕರು ಸಹಿಪ್ರಾ ಶಾಲೆ ವಣೇನೂರು, ಇಬ್ರಾಹಿಂ ಮುಖಂಡರು ಹಾಗೂ ಶ್ರೀಮತಿ ಪ್ರೇಮಲತಾ ವ್ಯವಸ್ಥಾಪಕರು ವರ್ಲ್ಡ್ ವಿಷನ್ ಇಂಡಿಯಾ ಎಡಿಪಿ ಬಳ್ಳಾರಿ ಹಾಗೂ ಸಿಬ್ಬಂದಿಯವರು ಭಾಗವಹಿಸಿದ್ದರು.

# 1.20 ಲಕ್ಷ ದೇಣಿಗೆ ನೀಡಿದ ಸುರೇಶ್ ಬಾಬು



ಬಳ್ಳಾರಿ : ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮೆಟ್ರಿ ಗ್ರಾಮದಲ್ಲಿ ಅಪ್ಪು ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಮ್ಮ ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ನಾಯಕರಾದ ಟಿ ಹೆಚ್ ಸುರೇಶ್ ಬಾಬುರವರು ಪಾಲ್ಗೊಂಡು, ನಾಡಿನಾದ್ಯಂತ ವಿವಿಧ ಸಾಮಾಜಿಕ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಆಚರಿಸುತ್ತಿರುವ ಡಾ॥ ಪುನೀತ್ ರಾಜ್ ಕುಮಾರ್ ರವರ ಜನ್ಮದಿನವನ್ನು ಕಂಪ್ಲಿ ಕ್ಷೇತ್ರದಲ್ಲೂ ವಿಶೇಷವಾಗಿ ಆಚರಿಸುವುದರ ಉದ್ದೇಶದಿಂದ ಸುಮಾರು 1.2 ಲಕ್ಷ ರೂ ದೇಣಿಗೆಯಾಗಿ ನೀಡಿ, ನಗುಮುಖದ ಒಡೆಯ ಪುನೀತ್ ರಾಜಕುಮಾರ್ ರವರ ಸಾಮಾಜಿಕ ಪ್ರಜ್ಞೆಯ ಸಮಾಜ ಸೇವೆಯನ್ನು ಕಾರ್ಯಕ್ರಮದಲ್ಲಿ ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಮೆಟ್ರಿ ಗ್ರಾಮದ ಪುನೀತ್ ರಾಜಕುಮಾರ್ ಅಭಿಮಾನಿ ಬಂಧುಗಳು, ಗ್ರಾಮದ ಯುವಕರು, ನಮ್ಮ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಜೊತೆಯಲ್ಲಿದ್ದರು.

# ಯಜ್ಞ ಮಂಟಪ ಉದ್ಘಾಟಿಸಿದ ಪ್ರಭು ಸಾರಂಗದೇವ ಶ್ರೀಗಳು




ಕಲಕೇರಿ: ಗ್ರಾಮದ ಜೆ ಜೆ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆದಿ ಜಗದ್ಗುರು ಪಂಚಾಚಾರ್ಯರ ಯುಗಮಾನೋತ್ಸವ ಸಮಿತಿ ಹಾಗೂ ಜಯಶಾಂತಲಿಂಗೇಶ್ವರರ ಮಠದ ಸಹಯೋಗದಲ್ಲಿ ಹಮ್ಮಿಕೊಂಡ 11 ದಿನಗಳ ವಿವಿದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಶನಿವಾರ ಬೆಳಿಗ್ಗೆ ಪ್ರಭುಸಾರಂಗದೇವ ಶಿವಾಚಾರ್ಯರು ಯಜ್ಞ ಮಂಟಪವನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು ಲೋಖ ಕಲ್ಯಾಣಾರ್ಥವಾಗಿ ಹಮ್ಮಿಕೊಂಡ ಯಜ್ಞ ಹಾಗೂ ಚಂಡಿಯಾಗ ಕಾರ್ಯದಲ್ಲಿ ಬಾಗಿಯಾಗುವದರಿಂದ ಮನಸ್ಸಿಗೆ ನೆಮ್ಮದಿ ಲಭಿಸುವದರ ಜೊತೆಗೆ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ಹೇಳಿದರು.

ಕಂಪ್ಲಿಯ ಸಾಂಗತ್ರಯ ವೈಧಿಕ ಪಾಠಶಾಲೆಯ ವೈಧಿಕ ವೃಂದದಿಂದ ಗಂಗಾಪೂಜೆ ಹೋಮ ಹವನಗಳು ನಡೆದವು, ಯಜ್ಞದಲ್ಲಿ ಸುಮಾರು 200ಕ್ಕೂ ಹೆಚ್ಚು ದಂಪತಿಗಳು ಇಂದಿನ ಕಾರ್ಯದಲ್ಲಿ ಬಾಗಿಯಾದರು.

ಮದ್ಯಾಹ್ನ 3 ಗಂಟೆಗೆ ಚಂಡಿಯಾಗ ಕಾರ್ಯಕ್ರಮ ಮಾಗಣಗೇರಿಯ ಡಾ.ವಿಶ್ವಾರಾಧ್ಯ ಶಿವಾಚಾರ್ಯರ ಪಾದಪೂಜೆಯೊಂದಿಗೆ ನೆರೆವೆರಿತು.

ಈ ವೇಳೆ ಮಹಾರುದ್ರಯಜ್ಞದ ಮಂಟಪವನ್ನು ಶ್ರೀಗಳು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಜಾಲಹಳ್ಳಿಯ ಜಗಧಾರಾಧ್ಯ ಜಯಶಾಂತಲಿಂಗೇಶ್ವರ ಶಿವಾಚಾರ್ಯರು, ಸಮ್ಮೇಳನಾಧ್ಯಕ್ಷ ಪದ್ಮಬಾಸ್ಕರ ನೀಲಕಂಠ ಶಿವಾಚಾರ್ಯರು, ಹಿರೂರಿನ ಜಯಸಿದ್ದೇಶ್ವರ ಶಿವಾಚಾರ್ಯರು, ಕಲಕೇರಿ ಹಿರೇಮಠದ ಸಿದ್ದರಾಮ ಶ್ರೀಗಳು, ಗದ್ದುಗೇಮಠದ ಮಡಿವಾಳೇಶ್ವರ ಶ್ರಿಗಳು, ಕಿರಣ ದೇವರು ಜಾಲಹಳ್ಳಿಮಠ, ಕಂಪ್ಲಿಯ ಪಂಡಿತ್ ಶಶಿದರ ಶಾಸ್ತ್ರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೀದಿ ಬದಿ ವ್ಯಾಪಾರಿಗಳಿಗೆ ಛತ್ರಿ ವಿತರಣೆ




ಕಲಕೇರಿ: ವಿಜಯಪುರ ಜಿಲ್ಲೆಯೂ ಬರಗಾಲ ಜಿಲ್ಲೆ, ಬಿಸಿಲಿನ ಜಿಲ್ಲೆ ಎನ್ನುವ ಖ್ಯಾತಿಯನ್ನು ಹೊಂದಿದ್ದು, ಬಿಸಿಲಿನ ತಾಪ ಹೆಚ್ಚಾಗಿದ್ದು ಬೀದಿ ಬದಿ ವ್ಯಾಪಾರಿಗಳಿಗೆ ನೆರಳು ಒದಗಿಸುವ ನಿಟ್ಟಿನಲ್ಲಿ ಗ್ರಾಮದ ಬೀದಿ ಬದಿ ವ್ಯಾಪಾರಿಗಳಿಗೆ ಎಬಿಡಿ ಪೌಂಡೇಷನ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಮುಖಂಡರಾದ ಆನಂದಗೌಡ ದೊಡ್ಡಮನಿ ಅವರ ವತಿಯಿಂದ ಮಾನವೀಯತೆಯ ನೆರಳು ಎಂಭ ಸಂಕಲ್ಪದೊಂದಿಗೆ ದೇವರಹಿಪ್ಪರಗಿ ಮತಕ್ಷೇತ್ರದಲ್ಲಿ ಛತ್ರಿ ವಿತರಿಸಿಲಾಗುತ್ತಿದೆ.

ಈ ನಿಟ್ಟಿನಲ್ಲಿ ಕಲಕೇರಿಯಲ್ಲಿಯೂ ಛತ್ರಿ ವಿತರಣೆ ಮಾಡುತ್ತಿದ್ದೆವೆ ಎಂದು ಮುಖಂಡರಾದ ಸೋಮನಗೌಡ ಆನೇಸೂರ ಮಾತನಾಡಿದರು.

ಜೀವನ ನಡೆಸಲು ಬೀದಿಬದಿ ವ್ಯಾಪಾರಿಗಳು ಮಳೆ, ಗಾಳಿ, ಬಿಸಿಲು ಲೆಕ್ಕಿಸದೇ ಹಣ್ಣು, ತರಕಾರಿ, ಸೇರಿದಂತೆ ಸಣ್ಣಪುಟ್ಟ ವ್ಯಾಪಾರ ವಹಿವಾಟುಗಳಲ್ಲಿ ನಿರತರಾಗಿರುತ್ತಾರೆ, ಸಮಾಜಕ್ಕೆ ಇಂತಹ ವ್ಯಾಪಾರಸ್ಥರ ಕೊಡುಗೆ ಅಪಾರವಾದದು ಅವರಿಗೆ ಈ ಛತ್ರಿಗಳನ್ನು ವಿತರಿಸುತ್ತಿರುವುದು ಸಂತಸ ತಂದಿದೆ ಎಂದು ಮುಖಂಡರಾದ ಸೋಮನಗೌಡ ಆನೇಸೂರ ಮಾತನಾಡಿದರು.

ಈ ವೇಳೆ ಮುಖಂಡರಾದ ಪ್ರಜ್ವಲ್ ದೇಸಾಯಿ, ದಾವಲಸಾಬ ನಾಯ್ಕೋಡಿ. ರಮೇಶ ಮೋಪಗಾರ, ದೇವಿಂದ್ರ ಬಡಿಗೇರ, ಹುಸೇನ ದೊಡ್ಡಮನಿ, ಸಂಜು ಪವಾರ, ನಜೀರ ಕೋಬಾಳ, ಮಹಿಬೂಬ ಭಾಗವಾನ, ಮೈಬೂಬ ಮೇಲಿನಮನಿ, ದೌಲತಪಟೇಲ್ ಬಿರಾದಾರ, ಸೇರಿಂದಂತೆ ಅನೇಕರು ಇದ್ದರು,

## ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ 45 ದಿನಗಳ ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು :**

18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, BPL ಕಾರ್ಡ ಹೊಂದಿರಬೇಕು, ದಾಖಲೆಗಳು. BPL ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್. 4 ಭಾವಚಿತ್ರಗಳನ್ನು ಲಗತ್ತಿಸಬೇಕು.

ತರಬೇತಿ ಅವಧಿ ಮಾರ್ಚ. 23, 2023 ರಿಂದ ಪ್ರಾರಂಭವಾಗಲಿದೆ.

ಅರ್ಜ ಸಲ್ಲಿಸುವ ಕೊನೆಯ ದಿನಾಂಕ ಮಾರ್ಚ. 20 2023, ರೊಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಕೆಳಗೆ ನೀಡಿದ https://docs.google.com/forms/d/e/1FAIpQLSdZEI9npV5dVuQbdqFXUGc6yt__7daI02YrhyvRSLywjlFfKA/viewform?vc=0&c=0&w=1&flr=0 ಗೂಗಲ್ ಪಾರ್ಮ ಲಿಂಕನಲ್ಲಿ ಮಾಹಿತಿ ಸಲ್ಲಿಸಬಹುದಾಗಿದೆ.

ಸಂಸ್ಥೆಯ ವಿಳಾಸ ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ, ಬೆಳಗಾವಿ – 590015 ಭೇಟಿ ನಿಡಬಹುದು.

45 ದಿನಗಳಕಾಲ ತರಬೇತಿ ಅವಧಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2440644, 8296792166, 9845750043, 8050406866, 8867388906, 9449860564 ಗೆ 9.30 ರಿಂದ ಸಾಯಂಕಾಲ 6. ವರೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಮಹಿಳಾ ಐಟಿಐ: ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಮಹಿಳಾ) ಉದ್ಯಮಬಾಗ ಇಲ್ಲಿ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆಯಡಿ (PMKVY4.0) ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಯ ಪ್ರವೇಶಕ್ಕಾಗಿ Data Entry Operator, CNC Operator – Vertical Machining Centre, Assistant Electrician, Electric Vehicle Service Technician ಈ ಕೋರ್ಸುಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದಿಂದ ಸರ್ಟಿಫಿಕೇಟ್‌ಗಳನ್ನು ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಮಾರ್ಚ.25 2023 ರ ಒಳಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಉದ್ಯಮಬಾಗ ಕಛೇರಿಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 9632130029, 9663040353, 9047296100 ಗೆ ಸಂಪರ್ಕಿಸಬಹುದು ಎಂದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್.ಎಸ್.ಎಲ್.ಸಿ/ಐಟಿಐ ಪಾಸಾದ ಅಭ್ಯರ್ಥಿಗಳಿಗೆ ಜಿಲ್ಲಾ ಮಟ್ಟದ ಅಪ್ರೆಂಟಿಸ್ ಮೇಳ

ಬೆಳಗಾವಿ: ಶಿಶುಕ್ಷು ತರಬೇತಿ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿಸಲು ಹಾಗೂ ತರಬೇತಿದಾರರಿಗೆ ಅನುಕೂಲವಾಗುವಂತೆ ಜಿಲ್ಲಾ ಮಟ್ಟದ (PMNAM) ಅಪ್ರೆಂಟಿಸ್ ಮೇಳವನ್ನು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೆ.ಎಲ್.ಇ ಆಸ್ಪತ್ರೆ ಎದುರು ಗೋಕಾಕ ಇಲ್ಲಿ ಮಾರ್ಚ.20 2023 ರಂದು ಬೆಳಿಗ್ಗೆ 10.30 ಗಂಟೆಗೆ ಆಯೋಜಿಸಲಾಗಿದೆ.

ಸದರಿ ಮೇಳದಲ್ಲಿ ಹಲವಾರು ಉದ್ಯಮಿಗಳು ಭಾಗವಹಿಸಲಿದ್ದು, ಆಸಕ್ತ ಎಸ್.ಎಸ್.ಎಲ್.ಸಿ/ಐಟಿಐ ಪಾಸಾದ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರ ಕಾರ್ಯಾಲಯ ಸ.ಕೈ.ತ.ಸಂಸ್ಥೆ ಗೋಕಾಕ– ದೂರವಾಣಿ ಮತ್ತು ಫ್ಯಾಕ್ಸ್ ಸಂಖ್ಯೆ 08332224006 ಗೆ ಅಥವಾ ಇಮೇಲ್ ವಿಳಾಸ govtitigkk@gmail.com ಅಥವಾ ಮೊಬೈಲ್ ಸಂಖ್ಯೆ 7892955100, 9341671956 ಗೆ ಸಂಪರ್ಕಿಸಬಹುದು ಎಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ: ಡಿಬಿಟಿ ತಂತ್ರಾಂಶದಲ್ಲಿ ಮಾಹಿತಿ ಅಳವಡಿಸುವಂತೆ ಸೂಚನೆ

ಬೆಳಗಾವಿ: ರಾಜ್ಯ ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಹಾಗೂ ಕುಟುಂಬ ಪಿಂಚಣಿಯನ್ನು ಆಧಾರ್ ಆಧಾರಿತ ನೇರ ಹಣ ಸಂದಾಯದ ಮೂಲಕ ಪಿಂಚಣಿಯನ್ನು ಪಾವತಿಸಲು ಫಲಾನುಭವಿಗಳ ವಿವರಗಳನ್ನು ಆಧಾರ ಕಾರ್ಡನಲ್ಲಿ ಇದ್ದಂತೆ ಡಿಬಿಟಿ ತಂತ್ರಾಂಶದಲ್ಲಿ ಅಳವಡಿಸುವಂತೆ ಸೂಚಿಸಲಾಗಿದೆ.

ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ ಹಾಗೂ ಗೋವಾ ವಿಮೋಚನಾ ಚಳುವಳಿಯ ಪಿಂಚಣಿಯನ್ನು ಪಡೆಯುತ್ತಿರುವ ಅರ್ಹ ಫಲಾನುಭವಿಗಳು ತಮ್ಮ ವಿವರಗಳನ್ನು ಡಿಬಿಟಿ ತಂತ್ರಾಂಶದಲ್ಲಿ ಅಳವಡಿಸಬೇಕಾಗಿರುವ ಕಾರಣ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಆಧಾರ ಕಾರ್ಡ ಜೆರಾಕ್ಸ್ ಹಾಗೂ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಜೀವಿತ ಪ್ರಮಾಣ ಪತ್ರಗಳನ್ನು ಫಲಾನುಭವಿಗಳ ಜೊತೆಗಾರರು ಕೂಡಲೇ ಜಿಲ್ಲಾಧಿಕಾರಿಗಳ ಕಾರ್ಯಾಲಯದ ರೂ.ನಂ. 5 ರಲ್ಲಿ ಸಲ್ಲಿಸಬಹುದಾಗಿದೆ.

ದೂರದ ತಾಲ್ಲೂಕಿನವರು ತಮ್ಮ ತಾಲ್ಲೂಕು ಕಛೇರಿಯ ಸ್ವಾತಂತ್ರ್ಯ ಯೋಧರ ವಿಷಯನಿರ್ವಾಹಕರ ಹತ್ತಿರ ಮಾರ್ಚ.21 2023 ರೊಳಗಾಗಿ ಸಲ್ಲಿಸಬಹುದು.

ಮಾಹಿತಿ ಸಲ್ಲಿಸಲು ತಪ್ಪಿದ್ದಲ್ಲಿ ಏಪ್ರಿಲ್–2023 ನೇ ಮಾಹೆಯ ಪಿಂಚಣಿಯನ್ನು ತಮ್ಮ ಖಾತೆಗೆ ಜಮಾ ಮಾಡಲಾಗುವುದಿಲ್ಲ (ಪಿಂಚಣಿದಾರರನ್ನು ಕರೆತರಬಾರದು ಅವರ ಜೊತೆಗಾರರು ಮಾತ್ರ ದಾಖಲೆಗಳನ್ನು ಈ ಕಾರ್ಯಾಲಯಕ್ಕೆ ತಂದು ಸಲ್ಲಿಸತಕ್ಕದ್ದು) ಎಂದು ಬೆಳಗಾವಿಯ ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಸಭೆ ಚುನಾವಣೆ: ತೀವ್ರ ನಿಗಾ ವಹಿಸಲು ನಿರ್ದೇಶನ

# ಲೋಪದೋಷ ಕಂಡುಬಂದರೆ ಕ್ರಮ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಎಚ್ಚರಿಕೆ

ಬೆಳಗಾವಿ: ಚುನಾವಣಾ ಕರ್ತವ್ಯದಲ್ಲಿ ಯಾವುದೇ ರೀತಿಯ ಲೋಪದೋಷ ಉಂಟಾಗದಂತೆ ಜಾಗರೂಕತೆಯಿಂದ ಹಾಗೂ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಸಂದರ್ಭದಲ್ಲಿ ಚುನಾವಣೆ ಘೋಷಣೆಯಾಗಬಹುದು. ಆದ್ದರಿಂದ ಎಲ್ಲ ನೋಡಲ್ ಅಧಿಕಾರಿಗಳು ಮತ್ತು ತಂಡಗಳು ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚನೆ ನೀಡಿದರು.



ಸುವರ್ಣ ವಿಧಾನಸೌಧದ ಸಭಾಂಗಣದಲ್ಲಿ ಶನಿವಾರ(ಮಾ.18) ಏರ್ಪಡಿಸಲಾಗಿದ್ದ ಚುನಾವಣಾಧಿಕಾರಿಗಳು, ನೋಡಲ್ ಅಧಿಕಾರಿಗಳು, ಸೆಕ್ಟರ್ ಅಧಿಕಾರಿಗಳು ಮತ್ತು ವಿವಿಧ ತಂಡಗಳ ಒಂದು ದಿನದ ವಿಶೇಷ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಬೆಳಗಾವಿ ಗಡಿ ಜಿಲ್ಲೆಯಾಗಿರುವುದರಿಂದ ಚುನಾವಣಾ ಸಂದರ್ಭದಲ್ಲಿ ನಗದು, ಮದ್ಯ ಸೇರಿದಂತೆ ವಿವಿಧ ಬಗೆಯ ವಸ್ತುಗಳನ್ನು ಅಕ್ರಮವಾಗಿ ರಾಜ್ಯದ ಇತರೆ ಜಿಲ್ಲೆಗಳಿಗೂ ಸಾಗಿಸುವ ಸಾಧ್ಯತೆಗಳಿರುತ್ತವೆ. ಆದ್ದರಿಂದ ಚೆಕ್ ಪೋಸ್ಟ್ ಗಳಲ್ಲಿ ತೀವ್ರ ನಿಗಾ ವಹಿಸಬೇಕು.

ಯಾವುದೇ ರೀತಿಯ ಅಕ್ರಮ ಅಥವಾ ನೀತಿಸಂಹಿತೆ ಉಲ್ಲಂಘನೆ ಕಂಡುಬಂದಾಗ ಫ್ಲೈಯಿಂಗ್ ಸ್ಕ್ವಾಡ್ ಟೀಮ್(ಎಫ್.ಎಸ್.ಟಿ), ಸ್ಟ್ಯಾಟಿಕ್ ಸರ್ವೆಲನ್ಸ್ ಟೀಮ್(ಎಸ್.ಎಸ್.ಟಿ), ವಿಡಿಯೋ ವೀವಿಂಗ್ ಟೀಮ್(ವಿ.ಎಸ್.ಟಿ) ಸೇರಿದಂತೆ ಎಲ್ಲಾ ತಂಡಗಳು ಕೂಡಲೇ ಸ್ಪಂದಿಸಬೇಕು. 24 ಗಂಟೆಗಳ ಕಾಲ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಮೂರು ಪಾಳಿಯಲ್ಲಿ ತಂಡಗಳನ್ನು ನಿಯೋಜಿಸಲಾಗುವುದು.

ಘಟನೆ ಮತ್ತು ಪ್ರಕರಣದ ಬಗ್ಗೆ ಮಾಹಿತಿ ದೊರೆತ ತಕ್ಷಣವೇ ಸ್ಥಳಕ್ಕೆ ದೌಡಾಯಿಸಿ ಪರಿಶೀಲಿಸಬೇಕು. ವಿಡಿಯೋ ಚಿತ್ರೀಕರಣ ಮಾಡಿಕೊಂಡು ಖಚಿತ ದಾಖಲೆಗಳೊಂದಿಗೆ ಪ್ರಕರಣವನ್ನು ದಾಖಲಿಸಬೇಕು. ಈ ತಂಡಗಳಿಗೆ ಅಗತ್ಯ ಅಧಿಕಾರ ಮತ್ತು ಪರಿಕರಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು. ನಗದು, ಮದ್ಯ ಅಥವಾ ಬೆಲೆಬಾಳುವ ವಸ್ತುಗಳು ದೊಡ್ಡ ಪ್ರಮಾಣದಲ್ಲಿ ವಶಪಡಿಸಿಕೊಂಡ ತಕ್ಷಣವೇ ಚುನಾವಣಾಧಿಕಾರಿಗಳಿಗೆ ಮಾಹಿತಿಯನ್ನು ನೀಡಬೇಕು.

**ಕರ್ತವ್ಯಲೋಪ ಎಸಗಿದರೆ ಕಠಿಣ ಕ್ರಮ–ಎಚ್ಚರಿಕೆ:**

ಯಾವುದೇ ವ್ಯಕ್ತಿ ಅಥವಾ ಪಕ್ಷಗಳ ಜತೆ ಗುರುತಿಸಿಕೊಳ್ಳದೇ ನಿಷ್ಪಕ್ಷಪಾತದಿಂದ ಚುನಾವಣಾ ಕರ್ತವ್ಯ ನಿರ್ವಹಿಸಬೇಕು. ಒಂದು ವೇಳೆ ಲೋಪವೆಸಗಿದರೆ ಚುನಾವಣಾ ಆಯೋಗವು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿ–ದರು. ಕರ್ತವ್ಯಲೋಪವನ್ನು ಆಯೋಗವು ಗಂಭೀರವಾಗಿ ಪರಿಗಣಿಸಲಿದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿ ಅರಿತು–ಕೊಂಡು ಯಾವುದೇ ಗೊಂದಲಕ್ಕೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು.

ಇದೇ ರೀತಿ ಚುನಾವಣಾ ಅಧಿಕಾರಿ ಮತ್ತು ಸಿಬ್ಬಂದಿ ಕರ್ತವ್ಯ ನಿರ್ವಹಣೆಗೆ ಯಾರೇ ಅಡ್ಡಿಪಡಿಸಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಇಂತಹ ಘಟನೆ ನಡೆದಾಗ ಕೂಡಲೇ ಚುನಾವಣಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಹೇಳಿದರು.

**ಚುನಾವಣಾ ಪ್ರಕ್ರಿಯೆ–23 ಸಾವಿರಕ್ಕೂ ಅಧಿಕ ಜನರು ಭಾಗಿ:**

ಬೆಳಗಾವಿ ಜಿಲ್ಲೆಯ ಹದಿನೆಂಟು ಮತಕ್ಷೇತ್ರಗಳಲ್ಲಿ ಒಟ್ಟಾರೆ 23 ಸಾವಿರಕ್ಕಿಂತ ಅಧಿಕ ಸಿಬ್ಬಂದಿ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ. ಚುನಾವಣಾಧಿಕಾರಿಗಳು, ನೋಡಲ್ ಅಧಿಕಾರಿಗಳು, ಸೆಕ್ಟರ್ ಅಧಿಕಾರಿಗಳು ಹಾಗೂ ವಿವಿಧ ತಂಡಗಳ ಸದಸ್ಯರೂ ಸೇರಿದಂತೆ ಪ್ರತಿಯೊಬ್ಬರಿಗೂ ಅವರವರ ಜವಾಬ್ದಾರಿ ತಿಳಿಸಿಕೊಡುವ ಉದ್ದೇಶದಿಂದ ವಿವಿಧ ಹಂತಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ.

ಚುನಾವಣಾ ಆಯೋಗದ ನಿರ್ದೇಶನದಂತೆ ಈ ಬಾರಿ ನಿಗದಿತ ಸಮಯಕ್ಕಿಂತ ಮುಂಚಿತವಾಗಿಯೇ ಅಧಿಕಾರಿಗಳ ವರ್ಗಾವಣೆ, ನಿಯೋಜನೆ, ತಂಡ ರಚನೆ ಮಾಡುವುದರ ಜತೆಗೆ ಅಗತ್ಯ ತರಬೇತಿಯನ್ನು ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ವಿನಾಕಾರಣ ಜನಪ್ರತಿನಿಧಿಗಳು ಅಥವಾ ರಾಜಕೀಯ ಮುಖಂಡರನ್ನು ಭೇಟಿ ಮಾಡುವಂತಿಲ್ಲ. ಈ ಬಗ್ಗೆ ಸಂಬಂಧಿಸಿದ ಇಲಾಖೆಯ ಮುಖ್ಯಸ್ಥರು ನಿಗಾ ವಹಿಸಬೇಕು. ಕಚೇರಿಗೆ ಸಂಬಂಧಿಸಿದಂತೆ ಏನೇ ಕೆಲಸಗಳಿದ್ದರೂ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಸಭೆ ನಡೆಸಬೇಕು ಎಂದರು.

**ತಂಡಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು:**

ಚುನಾವಣೆಯನ್ನು ಸುಗಮವಾಗಿ ನಡೆಸುವ ನಿಟ್ಟಿನಲ್ಲಿ ಎಲ್ಲ ತಂಡಗಳು ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಡಾ.ಎಂ.ಬಿ.ಬೋರಲಿಂಗಯ್ಯ ಹೇಳಿದರು.

ಫ್ಲೈಯಿಂಗ್ ಸ್ಕ್ವಾಡ್(ಎಫ್.ಎಸ್.ಟಿ.), ಸ್ಟ್ಯಾಟಿಕ್ ಸರ್ವೆಲನ್ಸ್ ಟೀಮ್(ಎಸ್.ಎಸ್.ಟಿ), ವಿಡಿಯೋ ಸರ್ವೆಲನ್ಸ್ ಟೀಮ್(ವಿ.ಎಸ್.ಟಿ.), ವಿಡಿಯೋ ವೀವಿಂಗ್ ಟೀಮ್(ವಿ.ವಿ.ಟಿ) ಗಳನ್ನು ಈಗಾಗಲೇ ರಚಿಸಲಾಗಿರುವುದರಿಂದ ತಮ್ಮ ಕೆಲಸಗಳ ಬಗ್ಗೆ ತಿಳಿದುಕೊಳ್ಳಬೇಕು. ಬೆಳಗಾವಿ ದೊಡ್ಡ ಜಿಲ್ಲೆ ಮತ್ತು ಗಡಿ ಜಿಲ್ಲೆಯಾಗಿರುವುದರಿಂದ ಎಲ್ಲ ತಂಡಗಳು ದಿನದ ಇಪ್ಪತ್ನಾಲ್ಕು ತಾಸು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು. ತಮಗೆ ವಹಿಸುವ ಕೆಲಸ ಮಹತ್ವ ಹಾಗೂ ಸ್ವರೂಪವನ್ನು ಸರಿಯಾಗಿ ತಿಳಿದುಕೊಂಡು ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಬೇಕು. ನೀತಿಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ಯಾವುದೇ ದೂರು ಅಥವಾ ಮಾಹಿತಿ ಬಂದರೆ ತಂಡಗಳು ಸಮಯ ವ್ಯರ್ಥ ಮಾಡದೇ ತಕ್ಷಣವೇ ಕಾರ್ಯಪ್ರವೃತ್ತಗೊಳ್ಳಬೇಕು. ಏನೇ ಗೊಂದಲಗಳಿದ್ದರೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಮುಂದುವರಿಯಬೇಕು ಎಂದು ಪೊಲೀಸ್ ಆಯುಕ್ತರಾದ ಡಾ.ಎಂ.ಬಿ.ಬೋರಲಿಂಗಯ್ಯ ತಿಳಿಸಿದರು.

ಗಡಿಭಾಗದಲ್ಲಿ ಚೆಕ್ ಪೋಸ್ಟ್ ಗಳಲ್ಲಿ ನಿಯೋಜಿಸಲಾಗಿರುವ ತಂಡಗಳು ಕಟ್ಟುನಿಟ್ಟಾಗಿ ಪ್ರತಿಯೊಂದು ವಾಹನವನ್ನು ಪರಿಶೀಲಿಸಬೇಕು.

ಮತದಾರರನ್ನು ಓಲೈಸಲು ಉಡುಗೊರೆಗಳು, ಸೀರೆ, ಗೃಹಬಳಕೆಯ ವಸ್ತುಗಳನ್ನು ಹಂಚುವುದು ಅಥವಾ ಯಾವುದೇ ರೀತಿಯ ಆಸೆ–ಆಮಿಷಗಳನ್ನು ಒಡ್ಡುವುದು ಕಂಡುಬಂದರೆ ಎಫ್.ಎಸ್.ಟಿ. ತಂಡದವರು ಕೂಡಲೇ ಪರಿಶೀಲನೆ ನಡೆಸಿ ವಸ್ತುಗಳನ್ನು ವಶಪಡಿಸಿಕೊಂಡು ಪ್ರಕರಣವನ್ನು ದಾಖಲಿಸಬೇಕು ಎಂದು ಪೊಲೀಸ್ ಆಯುಕ್ತರಾದ ಡಾ.ಎಂ.ಬಿ.ಬೋರಲಿಂಗಯ್ಯ ತಿಳಿಸಿದರು.

## ಸರ್ಕಾರಿ ಆಸ್ಪತ್ರೆಯಲ್ಲಿ ಮಹಿಳಾ ರೋಗಿ ಮೇಲೆ ಅತ್ಯಾಚಾರ: ಆರೋಪಿ ಬಂಧನ




ಕಲಬುರಗಿ: ಆಘಾತಕಾರಿ ಘಟನೆಯೊಂದರಲ್ಲಿ, ಇಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾಗಿದ್ದ ಮಹಿಳೆಯೊಬ್ಬರ ಮೇಲೆ ಅತ್ಯಾಚಾರ ಎಸಗಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಆರೋಪಿಯನ್ನು ಮತ್ತೊಬ್ಬರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಆರೋಪಿಯನ್ನು ಮೆಹಬೂಬ್ ಪಾಷಾ ಎಂದು ಗುರುತಿಸಲಾಗಿದೆ. ಗುಲ್ಬರ್ಗ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ (ಜಿಮ್ಸ್) ಈ ಘಟನೆ ನಡೆದಿದೆ. ಶುಕ್ರವಾರ ರಾತ್ರಿ 11 ಗಂಟೆಗೆ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ವಾರ್ಡ್‌ಗೆ ನುಗ್ಗಿದ ಆರೋಪಿ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ವೇಳೆ ಆಸ್ಪತ್ರೆಯಲ್ಲಿ ಅಲ್ಲಿಗೆ ಬಂದ ಅಪರಿಚಿತ ವ್ಯಕ್ತಿಯೊಬ್ಬರು ಆತನನ್ನು ಹಿಡಿದು ಅಧಿಕಾರಿಗಳಿಗೆ ಒಪ್ಪಿಸಿದ್ದಾರೆ.

ಸಂಸ್ತ್ರಸ್ತೆ ಕಳೆದ ಏಳು ತಿಂಗಳಿನಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆ–ಯುತ್ತಿದ್ದಾರೆ. ಬ್ರಹ್ಮಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಯ ವಿಚಾರಣೆ ನಡೆಸುತ್ತಿದ್ದಾರೆ. ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ.

## ಮಾ.19ರಂದು ಶ್ರೀ ವಿಷ್ಣು ವಿಲಾಸ ಸೌಹಾರ್ದ ಸಹಕಾರಿಯದ ಶಮಾನೋತ್ಸವ

ಸಿರುಗುಪ್ಪ : ನಗರದ ಶ್ರೀ ವಿಷ್ಣು ವಿಲಾಸ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತದ ಸಭಾಂಗಣದಲ್ಲಿ ಸಹಕಾರಿ ವತಿಯಿಂದ ಮಾ.19ತಾಲೂಕು ಕ್ರೀಡಾಂಗಣದಲ್ಲಿ ನಡೆಯುವ ದಶಮಾನೋತ್ಸವ ಸಮಾರಂಭದ ಕುರಿತು ಅಧ್ಯಕ್ಷ ಹೆಚ್.ಜೆ.ಹನುಮಂತಯ್ಯ ಸುದ್ದಿಗೋಷ್ಠಿ ನಡೆಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ನಗರದಲ್ಲಿ 2012 ಕೆಲವೇ ಕೆಲವು ಸಹಕಾರಿಗಳಿರುವ ಸಮಯದಲ್ಲಿ ಪ್ರಾರಂಭವಾದ ನಮ್ಮ ಸಹಕಾರಿಯು ನಗರದ ನಿವಾಸಿಗಳಿಗೆ ಉತ್ತಮ ಆರ್ಥಿಕತೆಯ ಅಡಿಪಾಯವನ್ನು ಹಾಕಿಕೊಟ್ಟಿದೆ.

ವ್ಯವಹಾರದ ಒಟ್ಟೊಟ್ಟಿಗೆ ಸಾಮಾಜಿಕ ಸೇವೆ, ಅರಣ್ಯಚಟುವಟಿಕೆ, ಧಾರ್ಮಿಕ ಕಾರ್ಯಗಳು ಇನ್ನಿತರಚಟುವಟಿಕೆಯಲ್ಲಿತೊಡಗಿದ್ದರೂ ಸಹ ನಗರದ ಪ್ರತಿ ಮನೆ ಮನೆಗೂ ಮುಟ್ಟಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಎಲ್ಲರಿಗೂ ಮನ ಮುಟ್ಟುವಂತೆ 10ನೇ ವರ್ಷ ಪೂರೈಸಿದ ಸಂಭ್ರಮದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಉಡುಪಿಯ ಪಲಿಮಾರು ಮಠದ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರು ಆಂದ್ರ ಪ್ರದೇಶದ ಪ್ರಸಿದ್ಧ ದೇವಾಲಯವಾದ ತಿರುಪತಿ ಟಿಟಿಡಿಯ ನಿವೃತ್ತ ವಿಶೇಷಾಧಿಕಾರಿಗಳು, ನಗರದ ಬಸವ ಮಠದ ಶ್ರೀ ಬಸವ ಭೂಷಣ ಸ್ವಾಮಿಗಳು ಕಾರ್ಯಕ್ರಮದ ಸಾನಿಧ್ಯವಹಿಸಲಿದ್ದಾರೆ.

ಉತ್ತಮ ವ್ಯವಸ್ಥೆಯಲ್ಲಿ ನಿರ್ಮಿಸಲಾದ ಶ್ರೀ.ದಿ.ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ್ ವೇದಿಕೆಯಲ್ಲಿ ಕರ್ನಾಟಕರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ಅಧ್ಯಕ್ಷ ಜೆ.ನಂಜನಗೌಡರಿಂದ ಉದ್ಘಾಟನೆ, ಶಿವಮೊಗ್ಗ ಜಿಲ್ಲೆಯ ವಿಧಾನ ಪರಿಷತ್ತಿನ ಶಾಸಕ ಡಿ.ಎಸ್.ಅರುಣ್, ಆರ್ಯವೈಶ್ಯ ಮಹಾಸಭಾದ ಅಧ್ಯಕ್ಷ ಆರ್.ಪಿ.ರವಿಶಂಕರ್ ಅವರಿಂದ ಸ್ಮರಣೆ ಸಂಚಿಕೆ ಬಿಡುಗಡೆ, ಹಾಗೂ ಹೆಸರಾಂತ ಕಲಾವಿಧ ಅರ್ಜುನ್ ಜನ್ಯತಂಡದಿಂದ ಸಂಗೀತ ಸಂಜೆ ಏರ್ಪಡಿಸಲಾಗಿದೆ.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಎಂ.ಎಸ್ ಸೋಮಲಿಂಗಪ್ಪ, ಕ.ರಾ.ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ಉಪಾಧ್ಯಕ್ಷ ಎ.ಆರ್. ಪ್ರಸನ್ನಕುಮಾರ್, ಸೇರಿದಂತೆ ಅನೇಕ ಗಣ್ಯಮಾನ್ಯರು ಆಗಮಿಸಲಿದ್ದು ತಾವೆಲ್ಲರೂ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ನಗರದ ಜನತೆಯಲ್ಲಿ ಮನವಿ ಮಾಡಿದರು.

ಇದೇ ವೇಳೆ ಸಹಕಾರಿ ನಿರ್ದೇಶಕ ಕೆ.ಆರ್.ನಾಗರಾಜ, ವ್ಯವಸ್ಥಾಪಕ ಆರ್.ಅನಿಲ್ ಇದ್ದರು.

## ಲಂಚ ಸ್ವೀಕರಿಸಿದ್ದ ಕಂದಾಯ ನಿರೀಕ್ಷಕನಿಗೆ 5 ವರ್ಷ ಜೈಲು ಶಿಕ್ಷೆ, ರೂ 4 ಲಕ್ಷ ದಂಡ ವಿಧಿಸಿದ ನ್ಯಾಯಾಲಯ




ಬೆಂಗಳೂರು: ಲಂಚಕ್ಕೆ ಬೇಡಿಕೆ ಇಟ್ಟು ಸಿಕ್ಕಿಬಿದ್ದಿದ್ದ ಕಂದಾಯ ನಿರೀಕ್ಷಕನೊಬ್ಬನಿಗೆ ವಿಶೇಷ ನ್ಯಾಯಾಲಯ ಐದು ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸಿದ್ದು, 4 ಲಕ್ಷ ರೂಪಾಯಿ ದಂಡ ಪಾವತಿಸುವಂತೆ ಆದೇಶಿಸಿದೆ.

ಕೆಂಗೇರಿ ಹೋಬಳಿಯ ಕಂದಾಯ ನಿರೀಕ್ಷಕ ಸುರೇಶ್ ಜಿ.ಸಿ. (51) ದೋಷಿ ಎಂದು ತೀರ್ಮಾನಿಸಿರುವ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ಪ್ರಕರಣಗಳ ವಿಶೇಷ ನ್ಯಾಯಾಲಯ, 5 ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು ರೂ.4 ಲಕ್ಷ ದಂಡ ವಿಧಿಸಿದೆ.

ಮ್ಯುಟೇಷನ್ ಬದಲಾವಣೆ ಮಾಡಲು ಕೆಲ ವ್ಯಕ್ತಿಗಳಿಗೆ ಸುರೇಶ್ ರೂ. 5 ಲಕ್ಷ ಲಂಚ ನೀಡುವಂತೆ ಬೇಡಿಕೆ ಇಟ್ಟಿದ್ದರು. ನಂತರ ಚೌಕಾಸಿ ಮಾಡಿದಾಗ ರೂ.4 ಲಕ್ಷಗೆ ಒಪ್ಪಿಕೊಂಡಿದ್ದರು. ಇದರಂತೆ ರೂ.2 ಲಕ್ಷವನ್ನು ಮುಂಗಡ ಪಡೆದಿದ್ದರು. ರೂ.2 ಲಕ್ಷ ನೀಡಿದ್ದ ವ್ಯಕ್ತಿಗಳು ಉಳಿದ ಹಣ ನೀಡುವುದಕ್ಕೂ ಮುನ್ನ ಎಸಿಬಿಗೆ ದೂರು ನೀಡಿದ್ದಾರೆ. ಇದರಂತೆ 2016ರ ಸೆಪ್ಟೆಂಬರ್ 2ರಂದು ಲಂಚ ಪಡೆಯುತ್ತಿದ್ದಾಗ ಕಂದಾಯ ನಿರೀಕ್ಷಕನನ್ನು ಅಧಿಕಾರಿಗಳು ಬಂಧನಕ್ಕೊಳಪಡಿಸಿದ್ದರು.

ಪ್ರಕರಣದ ತನಿಖೆ ಪೂರ್ಣಗೊಳಿಸಿದ್ದ ಎಸಿಬಿ ಅಧಿಕಾರಿಗಳು, ವಿಶೇಷ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದರು. ಮಂಗಳವಾರ ವಿಚಾರಣೆ ಪೂರ್ಣಗೊಳಿಸಿದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಲಕ್ಷ್ಮೀನಾರಾಯಣ ಭಟ್ ಕೆ ಅವರು, ಸುರೇಶ್ ವಿರುದ್ಧದ ಆರೋಪಗಳು ಸಾಬೀತಾಗಿವೆ. ಲಂಚಕ್ಕೆ ಬೇಡಿಕೆ ಇಟ್ಟಿರುವುದು ಹಾಗೂ ಪಡೆದಿರುವುದು ದೃಢಪಟ್ಟಿದೆ' ಎಂದು ಪ್ರಕಟಿಸಿದರು. ಅಲ್ಲದೆ, ಸುರೇಶ್ ಅವರಿಗೆ ಐದು ವರ್ಷ ಕಠಿಣ ಜೈಲು ಶಿಕ್ಷೆ ಹಾಗೂ ರೂ.4 ಲಕ್ಷ ದಂಡ ವಿಧಿಸಿ ಆದೇಶ ಹೊರಡಿಸಿದರು.

## ಮೊದಲ ದಿನವೇ 50 ಕೋಟಿ ಬಾಚಿದ ಕಬ್ಜ ಚಿತ್ರ



ಬೆಂಗಳೂರು: ಕನ್ನಡದ ಮತ್ತೊಂದು ಸಿನಿಮಾ ಭಾರತೀಯ ಸಿನಿಮಾ ರಂಗದಲ್ಲಿ ಹೊಸ ಇತಿಹಾಸ ಬರೆದಿದೆ. ಆರ್. ಚಂದ್ರು ನಿರ್ದೇಶನದ 'ಕಬ್ಜ' ಸಿನಿಮಾದ ಮೊದಲ ದಿನದ ಕಲೆಕ್ಷನ್ ಕಾಂತಾರ ಮತ್ತು ಕೆಜಿಎಫ್ 1 ಚಿತ್ರಕ್ಕಿಂತ ಹೆಚ್ಚು ಗಳಿಕೆ ಮಾಡಿದೆ. ಗಾಂಧಿ ನಗರದ ಲೆಕ್ಕಾಚಾರದ ಪ್ರಕಾರ ಮೊದಲ ದಿನದ ಕಲೆಕ್ಷನ್ ಬರೋಬ್ಬರಿ 50 ಕೋಟಿ ಎಂದು ಅಂದಾಜಿಸಲಾಗಿದೆ. ಇದು ಭಾರತೀಯ ಸಿನಿಮಾ ರಂಗದಲ್ಲಿ ಮತ್ತೊಂದು ದಾಖಲೆ ಸೃಷ್ಟಿಸಿದೆ.

ಕೇವಲ ಭಾರತದಲ್ಲಿ ಮಾತ್ರವಲ್ಲ ವಿದೇಶದಿಂದಲೂ ಹಣ ಹರಿದು ಬಂದಿದ್ದು, ಹತ್ತು ಕೋಟಿಗೂ ಹೆಚ್ಚು ಗಳಿಕೆಯನ್ನು ಕಬ್ಜ ಮಾಡಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ನಿನ್ನೆ ಬಿಡುಗಡೆಯಾದಾಗ ಕೆಲವು ಕಡೆ ಫಸ್ಟ್ ಶೋಗೆ ಪ್ರತಿಕ್ರಿಯೆ ಭಾರೀ ಪ್ರಮಾಣದಲ್ಲಿ ಇಲ್ಲವೆಂದು ಹೇಳಲಾಗಿತ್ತು. ಆದರೆ, ಸಂಜೆ ಅಷ್ಟೊತ್ತಿಗೆ ಅಷ್ಟೂ ಶೋಗಳು ಹೌಸ್ ಫುಲ್ ಪ್ರದರ್ಶನ ಕಂಡಿವೆ. ಮಧ್ಯಾಹ್ನದಿಂದ ಥಿಯೇಟರ್ ಸಂಖ್ಯೆ ಹಾಗೂ ಶೋಗಳ ಸಂಖ್ಯೆ ಕೂಡ ಹೆಚ್ಚಳವಾಗಿದೆ.

ಸಿನಿಮಾ ಬಗ್ಗೆಯೂ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಿನಿಮಾ ವಿಮರ್ಶಕರು ನಿರ್ದೇಶಕ ಆರ್.ಚಂದ್ರು ಅವರನ್ನು ಹಾಡಿಹೊಗಳಿದ್ದಾರೆ. ಚಂದ್ರು ಹೀಗೂ ಸಿನಿಮಾ ಮಾಡುವುದಕ್ಕೆ ಸಾಧ್ಯವಾ? ಎಂದು ಬಣ್ಣಿಸಿದ್ದಾರೆ. ಅದರಲ್ಲೂ ಸಿನಿಮಾದ ಸೆಕೆಂಡ್ ಆಫ್ ಬಗ್ಗೆ ಪ್ರಂಶಸೆ ವ್ಯಕ್ತ ಪಡಿಸಿದ್ದಾರೆ. ಸುದೀಪ್ ಮತ್ತು ಶಿವರಾಜ್ ಕುಮಾರ್ ಮಾಡಿದ ಪಾತ್ರಗಳ ಬಗ್ಗೆ ಮತ್ತಷ್ಟು ಕುತೂಹಲ ಮೂಡಿಸುವಂತೆ ಬರೆದಿದ್ದಾರೆ.

ಉಪೇಂದ್ರ ಸ್ವತಃ ನಿರ್ದೇಶಕರಾಗಿದ್ದರೂ ಮೇಕಿಂಗ್ ಬಗ್ಗೆ ಮಾತನಾಡುತ್ತಾ, ಭಾರತೀಯ ಸಿನಿಮಾ ರಂಗ–ಕ್ಕೆ ಮತ್ತೊಬ್ಬ ಅದ್ಭುತ ನಿರ್ದೇಶಕ ಸಿಕ್ಕಿದ್ದಾರೆ ಎಂದು ಮಾಧ್ಯಮಗಳ ಮುಂದೆಯೇ ಆರ್.ಚಂದ್ರು ಅವರನ್ನು ಹೊಗಳಿದ್ದಾರೆ. ಬಾಲಿವುಡ್ ನಲ್ಲೂ ಕಬ್ಜ ಸಿನಿಮಾಗೆ ಅತ್ಯುತ್ತಮ ಪ್ರತಿಕ್ರಿಯೆ ಸಿಕ್ಕಿದ್ದು, ಅನುಪಮ್ ಖೇರ್ ಸೇರಿದಂತೆ ಅನೇಕ ಬಾಲಿವುಡ್ ಸಿಲೆಬ್ರಿಟಿಗಳು ಕನ್ನಡ ಸಿನಿಮಾವನ್ನು ಮೆಚ್ಚಿ ಮಾತನಾಡಿದ್ದಾರೆ. ನಿರ್ದೇಶಕ ಚಂದ್ರು ಅವರನ್ನು ಬಾಲಿವುಡ್ ಗೆ ಸ್ವಾಗತ ಎಂದು ಆಹ್ವಾನಿಸಿದ್ದಾರೆ.

# ಕಾಯಕದಿಂದಲೇ ಜಾತಿಯ ಹುಟ್ಟು ವಿನಃ ಬೇರೇನೂ ಇಲ್ಲ ಎಲ್ಲರ ಮೂಲ ಒಂದೇ: ಮಹಾಲಿಂಗ ಶ್ರೀ

ಭಾಲ್ಕಿ: 62ನೇ ದಿನದ ಮನೆಗೊಂದು ಅನುಭವ ಮಂಟಪ ಕಾರ್ಯಕ್ರಮ ಸುವರ್ಣ ಓಂಕಾರ ಬಲ್ಲೂರು ಅವರ ಮನೆಯಲ್ಲಿ ನೆರವೇರಿತು. ಪೂಜ್ಯಶ್ರೀ ಮಹಾಲಿಂಗ ದೇವರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿ–ದರು. ಜಾತಿಗಳು ಹೇಗೆ ಹುಟ್ಟಿಕೊಂಡವು ಎಂಬುದರ ಬಗ್ಗೆ ತಿಳಿಸಿದರು. ಹೆಣ್ಣು ಇಲ್ಲದೆ ಜಗವೇ ಇಲ್ಲ. ಹೆಣ್ಣು ಮಾಡದ ಕಾಯಕವೇ ಇಲ್ಲ. ಮನೆಯ ಒಳಗೂ ಹೊರಗೂ ದಿನದ 24ಕ್ಕೂ ಗಂಟೆಯೂ ಸಹ, ಯಾವುದೇ ಒಂದು ಕಾಯಕ ಆ ಹೆಣ್ಣು ಮಕ್ಕಳು ಒಂದು ದಿನ ಬಿಟ್ಟರೆ ಇಡೀ ಜಗವೇ ನಿಂತು ಬಿಡುತ್ತದೆ, ಅಸ್ತವ್ಯಸ್ತವಾಗುತ್ತದೆ. ಅಂತಹ ದೊಡ್ಡ ನಿಸ್ವಾರ್ಥ ಕಾಯಕ ಮಾತೆಯರದ್ದು. ಹಿಂದೆಯಿಂದಲೂ ಹೆಣ್ಣು ಮಕ್ಕಳು ಗಂಡಿನ ಜೊತೆ ಜೊತೆಗೆ ಮನೆ ನೋಡಿಕೊಳ್ಳುವುದರ ಜೊತೆಗೆ ಗಂಡನ ಕಾಯಕಕ್ಕೆ ಕೈ ಜೋಡಿಸುತ್ತಿದ್ದರು. ಕಂಬಾರರ ಹೆಂಡತಿ ಮಣ್ಣು ಹದ ಮಾಡುವುದು, ಅಗಸನ ಹೆಂಡತಿ ಬಟ್ಟೆ ತೊಳೆಯುವುದು, ಹೂಗಾರನ ಹೆಂಡತಿ ಹೂ ಕಟ್ಟುವ ಕಾರ್ಯ, ಹೀಗೆ ಗಂಡು ಹೆಣ್ಣು ಇಬ್ಬರೂ ಸೇರಿ ಕಾಯಕ ಮಾಡುತ್ತಿದ್ದರು. ಈ ಮೂಲಕ ಜಗತ್ತಿನಲ್ಲಿ ಕಾಯಕದಿಂದ ಜಾತಿಗಳು ಹುಟ್ಟಿದವು. ಮೂಲ ಜಾತಿ ಯಾವುದು ಇಲ್ಲ. ಎಲ್ಲರೂ ಒಂದೇ. ಜಾತಿ ಕುಲ ಏನೂ ಇಲ್ಲ ಎಲ್ಲವೂ ಮನುಷ್ಯ ಜಾತಿ.




ಮನುಷ್ಯ ಆವಿಷ್ಕಾರ ಅನ್ವೇಷಣೆಗಳನ್ನು ಮಾಡಿ ಅದರ ಪ್ರಭಾವದಿಂದ ಬದುಕಿಗಾಗಿ ಒಳ್ಳೆಯ ಸಮೃದ್ಧ ಜೀವನ ನಡೆಸಲು ಒಂದು ಕಾಯಕ ಮಾಡಲು ಆರಂಭಿಸಿದ. ಎಲ್ಲರೂ ಒಂದೇ ಕಾಯಕ ಮಾಡಲಿಲ್ಲ ಅವರ ಬದುಕಿನಲ್ಲಿ ಬೇಕಾಗುವ ಅಂಶಗಳನ್ನು ಇಟ್ಟುಕೊಂಡು ಕಾಯಕ ಆರಂಭಿಸಿದರು. ಅದೇ ರೀತಿ ಮುಂದೆ ಪೀಳಿಗೆ ನಡೆಸಲು ಮದುವೆ ಮಾಡಿಕೊಳ್ಳ ಬೇಕಾಗಿತ್ತು. ಹೇಗೆ ಯಾರನ್ನು ಮದುವೆಯಾಗಬೇಕು ಎಂದು ಯೋಚಿಸಿದಾಗ ಕುಂಬಾರ ಕುಂಬಾರಿಕೆ ಮಾಡುವವನ ಮಗಳನ್ನು ಮದುವೆಯಾದ ಯಾಕೆಂದರೆ ಬಡಿಗೆ ಕೆಲಸ ಮಾಡುವವನ ಮಗಳಿಗೆ ಕುಂಬಾರಿಕೆ ಬಗ್ಗೆ ತಿಳಿಯದು ಆಕೆಗೆ ಗೊತ್ತಿರುವುದು ಬರಿ ಬಡಿಗತನ. ಹೂಗಾರನ ಮಗಳಿಗೆ ಗೊತ್ತಿರುವುದು ಹೂ ಕಟ್ಟುವುದು ಕಮ್ಮಾರಿಕೆಯಲ್ಲ.

ಅದಕ್ಕೆ ಯಾವ ಕೆಲಸ ಗಂಡು ಮಾಡುತ್ತಿದ್ದನೋ ಅದೇ ಕಾಯಕದ ಮನೆಯ ಹೆಣ್ಣು ಹುಡುಕುವ ಪದ್ಧತಿ ಶುರುವಾಯಿತು. ಯಾವುದೋ ಗ್ರಾಮಕ್ಕೆ ಭೇಟಿ ಮಾಡಿ ಅಲ್ಲಿನ ಮಗುವನ್ನು ಮದುವೆ ಮಾಡಿಕೊಂಡು ತಂದು ಹೆಂಡತಿ ಮನೆಯಲ್ಲಿ ಗಂಡ ಅದೇ ಕೆಲಸ ಹೊರಗಡೆ ಮಾಡುತ್ತಾ ಜೀವನ ನಡೆಸುತ್ತಿದ್ದರು. ಹೂಗಾರನ ಹೆಂಡತಿ ಹೂ ಕಟ್ಟುವುದು ಆತ ಹೊರಗಡೆ ಮಾರಿಕೊಂಡು ಬರುವುದು, ಕಮ್ಮಾರನ ಹೆಂಡತಿ ಕಾಸುವುದು ಆತ ಅದನ್ನು ಮಾರುವುದು, ಹೀಗೆ ಶುರುವಾಗಿದ್ದೇ ಕಾಯಕ. ಅವರವರ ಉಪಜೀವನಕ್ಕೆ ಅದೇ ಕಾಯಕ ಮಾಡುವವರನ್ನು ಹುಡುಕಿ ಮದುವೆಯಾಗುತ್ತಿದ್ದರು. ಈ ಮೂಲಕ ಜನಾಂಗ ಬೆಳೆಯುತ್ತಾ ಹೋಯಿತು.

ಹೀಗೆ ಈ ಪದ್ಧತಿ ಬೆಳೆಯುತ್ತಾ ಹೋಯಿತು. ಮುಂದೆ ಒಂದು ದಿನ ಕಾಯಕ ಆಡುವವರ ಬಾಯಿಯಲ್ಲಿ ಜಾತಿಯಾಗಿ ಹೋಯಿತು. ಇವರು ಈ ಕೆಲಸ ಮಾಡುವವರು ಎನ್ನುವುದು ಹೋಗಿ ಇವರು ಈ ಜಾತಿಗೆ ಸೇರಿದವರು ಅವರು ಆ ಜಾತಿಗೆ ಸೇರಿದವರು ಎಂದು ಸಂಭೋದಿಸಲು ಶುರುವಾಯಿತು.

ಕಾಸಿ ಕಮ್ಮಾರನಾದ, ಬೀಸಿ ಮಡಿವಾಳನಾದ, ಹಾಸನಿಕ್ಕಿ ಸಾಲಿಗನಾದ, ವೇದವನೋದಿ ಹಾರುವನಾದ. ಕರ್ಣದಲ್ಲಿ ಜನಿಸಿದವರುಂಟೆ ಜಗದೊಳಗೆ? ಇದು ಕಾರಣ, ಕೂಡಲಸಂಗಮದೇವ, ಲಿಂಗಸ್ಥಲವನರಿದವನೇ ಕುಲಜನು!. ಎನ್ನುವ ಮೂಲಕ ಬಸವಣ್ಣನವರು ಜಾತೀಯತೆ ಹೀಗೆ ಹುಟ್ಟಿದ್ದೇ ವಿನಃ ಬೇರೇನೂ ಇಲ್ಲ. ಎಲ್ಲವೂ ಕಾಯಕವೇ ಯಾವ ಕಾಯಕವು ಹೆಚ್ಚಲ್ಲ ಕಡಿಮೆಯಲ್ಲ ಕಾಯಕದಿಂದಲೇ ಜಾತಿಯ ಹುಟ್ಟು ವಿನಃ ಬೇರೇನೂ ಇಲ್ಲ ಎಲ್ಲರೂ ಒಂದೇ ಎಂದು ಹೇಳಿದರು.

ಬಸವ ಪ್ರಾರ್ಥನೆಯನ್ನು ಅರುಣಾ ಹಾಗೂ ಕರುಣಾ ನಡೆಸಿಕೊಟ್ಟರು. ಸಾವಿತ್ರಿ ಧನರಾಜ್ ಪಾಟೀಲ್ ಅವರು ಅನುಭಾವ ಹೇಳಿದರು. 12ನೇ ಶತಮಾನದ ಶರಣೀಯರ ಕಾಯಕದ ಕುರಿತು ಮಾತನಾಡಿದರು. ಕರುಣಾ ಕಾರಬಾರಿ ಭಕ್ತಿಗೀತೆಯನ್ನು ಹಾಡಿದರು. ಬಸವರಾಜ ಮರೆ ಕಾರ್ಯಕ್ರಮ ನಿರೂಪಿಸಿದರು ಇದೇ ಸಂದರ್ಭದಲ್ಲಿ ವೇದಿಕೆ ಮೇಲಿದ್ದ ಎಲ್ಲರನ್ನು ಗೌರವಿಸಲಾಯಿತು. ಜೈಪ್ರಕಾಶ ಕುಂಬಾರ್, ವೈಜಿನಾಥ್ ಕುಂಬಾರ್, ಪ್ರಭಾವತಿ ಮರೆ, ಯವ್ವಮ್ಮ ಹುಲಸೂರೆ, ಶಾಂತಮ್ಮ ಬಿರಾದಾರ, ಶೋಭಾ ಹೌಶೆಟ್ಟಿ, ಗಂಗಮ್ಮ, ಮಂಗಲಾ, ಶಾಲಮ್ಮ, ತೀರ್ಥಮ್ಮ, ನೀಲಮ್ಮ, ಸ್ವೀಟಿ, ಈಶ್ವರಮ್ಮ, ಬಸಮ್ಮ, ರಾಣಿ ಆರ್ ಪಾಟೀಲ್ ಉಮಾದೇವಿ ಸವಳೆ, ಸುಶೀಲಾಬಾಯಿ, ಸರೋಜನ ಬಸವರಾಜ, ಸಂಗೀತಾ, ಇಂದುಮತಿ, ಶ್ರೀದೇವಿ, ಉಮಾದೇವಿ ಮಧುರಗೆ, ಈರಮ್ಮ, ಶಾಂತಮ್ಮ ಶಿರಗಾಪುರೆ, ಸುನೀತಾ ಲದ್ದೆ, ಮಮತಾ, ಮಲ್ಲಿಕಾರ್ಜುನ ಪವಡಶೆಟ್ಟಿ ಹೀಗೆ ಅನೇಕರು ಉಪಸ್ಥಿತರಿದ್ದರು. ಮಳೆಯ ನಡುವೆಯೂ ಕಾರ್ಯಕ್ರಮ ಬಹಳ ಚೆನ್ನಾಗಿ ನೆರವೇರಿತು.

ಅನುಪಮಂಟಪದಲ್ಲಿ ಹೇಗೆ ಚರ್ಚೆ ನಡೆ–ಯುತಿತ್ತೋ ಅದೇ ರೀತಿಯಲ್ಲಿ ಬಹಳ ಚೆನ್ನಾಗಿ ಚರ್ಚೆ ನಡೆಯಿತು ಮಂಗಲ ಹಾಗೂ ಪ್ರಸಾದ ದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು ಎಂದು ಶ್ರೀ ಶಾಂತಯ್ಯ ಸ್ವಾಮಿ ತಿಳಿಸಿದರು.

## ಪ್ರಹ್ಲಾದ್ ಜೋಶಿ ಹೆಲಿಕಾಪ್ಟರ್ ಲ್ಯಾಂಡಿಂಗ್ ವೇಳೆ ಅವಘಡ; ಗಾಳಿಯ ರಭಸಕ್ಕೆ ನೆಲಕ್ಕೆ ಬಿದ್ದ ಬ್ಯಾರಿಕೇಡ್



ವಿಜಯಪುರ: ಇತ್ತೀಚೆಗೆ ಕಲಬುರಗಿಯಲ್ಲಿ ಸಂಕಲ್ಪ ಯಾತ್ರೆಯಲ್ಲಿ ಭಾಗಿಯಾಗಲು ಬೆಂಗಳೂರಿನಿಂದ ಹೆಲಿಕಾಪ್ಟರ್ ಮೂಲಕ ಬಿಎಸ್ ವೈ ಪ್ಲಾಸ್ಟಿಕ್ ಚೀಲಗಳು ಹಾರಿ ಬಂದಿತ್ತು. ಇದೀಗ ಮತ್ತೊಂದು ಘಟನೆ ನಡೆದಿದೆ. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಲ್ಯಾಂಡಿಂಗ್ ವೇಳೆ ಅವಘಡ ಸಂಭವಿಸಿದೆ.

ವಿಜಯಪುರ ನಗರದ ಸೈನಿಕ ಶಾಲಾ ಆವರಣದಲ್ಲಿ ಹೆಲಿಕಾಪ್ಟರ್ ಚಕ್ರದ ಗಾಳಿಯ ರಭಸಕ್ಕೆ ಬ್ಯಾರಿಕೇಡ್ ನೆಲಕ್ಕುರುಳಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಫಲಾನುಭವಿಗಳ ಸಮಾವೇಶಕ್ಕೆ ಸಚಿವ ಪ್ರಹ್ಲಾದ್ ಜೋಶಿ ಹೆಲಿಕಾಪ್ಟರ್ ಮೂಲಕ ವಿಜಯಪುರಕ್ಕೆ ಆಗಮಿಸುತ್ತಿದ್ದರು. ಆದ್ರೆ ಶಾಲಾ ಆವರಣದಲ್ಲಿ ಜೋಶಿ ಅವರ ಹೆಲಿಕಾಪ್ಟರ್ ಲ್ಯಾಂಡಿಂಗ್ ವೇಳೆ ಅವಘಡ ಸಂಭವಿಸಿದೆ.

ಹೆಲಿಕಾಪ್ಟರ್ ಚಕ್ರದ ಗಾಳಿಯ ರಭಸಕ್ಕೆ ಬ್ಯಾರಿಕೇಡ್ ನೆಲಕ್ಕುರುಳಿದೆ. ನೆಲಕ್ಕೆ ಬಿದ್ದ ಬ್ಯಾರಿಕೇಡ್ಗಳನ್ನು ತಕ್ಷಣ ಪೊಲೀಸರು ಸರಿಪಡಿಸಿದ್ದಾರೆ. ಅದೃಷ್ಟವಶಾತ್ ಹೆಲಿಪ್ಯಾಡ್ನಲ್ಲಿ ಯಾವುದೇ ಅವಘಡ ಸಂಭವಿಸಿಲ್ಲ.

## ಬೆಳಗಾವಿಗೆ ರಾಹುಲ್ ಗಾಂಧಿ ಆಗಮನ; ಸಿಪಿಎಡ್ ಮೈದಾನಕ್ಕೆ ಭೇಟಿ: ಸಿದ್ಧತೆ ಪರಿಶೀಲಿಸಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ನಗರಕ್ಕೆ ಮಾ. 20ರಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ನಗರದ ಸಿಪಿಎಡ್ ಮೈದಾನಕ್ಕೆ ಭೇಟಿ ನೀಡಿ ಸಮಾವೇಶ ನಡೆಯುವ ಸ್ಥಳ ಹಾಗೂ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ರಾಜ್ಯದಲ್ಲಿ ರೈತ ಸಮಾವೇಶ, ಮಹಿಳಾ ಸಮಾವೇಶ ಮಾಡಲಾಗಿದ್ದು, ಈಗ ಬೆಳಗಾವಿಯಲ್ಲಿ ಯುವ ಸಮಾವೇಶ ಮಾಡಲಾಗುತ್ತಿದೆ. ಸಮಾವೇಶಕ್ಕೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಗಮಿಸುತ್ತಿದ್ದು, ಯುವಕರಿಗೆ ಹೊಸ ಸಂದೇಶ ನೀಡಲಿದ್ದಾರೆ ಎಂದು ತಿಳಿಸಿದರು.



ಬೆಳಗಾವಿ ಸಮಾವೇಶದಲ್ಲಿ ಸುಮಾರು ಎರಡು ಲಕ್ಷ ಜನ ಸೇರುವ ನಿರೀಕ್ಷೆ ಇದೆ. ರೋಡ್ ಶೋ ಮಾಡುವ ಬಗ್ಗೆ ಇನ್ನು ಖಚಿತವಾಗಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಗೆಲ್ಲಿಸಲು ಎಲ್ಲಾ ತಯಾರಿಗಳನ್ನು ನಡೆಸುತ್ತಿದ್ದೇವೆ ಜಿಲ್ಲೆಯಲ್ಲಿಯೂ 10ರಿಂದ 12 ಅಭ್ಯರ್ಥಿಗಳನ್ನು ಗೆಲ್ಲಿಸಲಾಗುವುದು ಎಂದು ತಿಳಿಸಿದರು.

ಯುವಕರನ್ನು ಮುಖ್ಯವಾಹಿನಿಗೆ ತರಲು ಕಾಂಗ್ರೆಸ್ ಪಕ್ಷ ಸದಾ ಬದ್ಧವಿದೆ. ಸಮಾವೇಶದಲ್ಲಿ ರಾಹುಲ್ ಗಾಂಧಿಯವರು ಯುವಕರಿಗಾಗಿ ಎರಡು ಘೋಷಣೆಗಳನ್ನು ಘೋಷಿಸಲಿದ್ದಾರೆ ಎಂದು ಮಾಹಿತಿ ನೀಡಿದ ಅವರು, ಪ್ರಧಾನಿ ಮೋದಿಯವರು ವರ್ಷಕ್ಕೆ 2 ಕೋಟಿ ಜನ ಯುವಕರಿಗೆ ಉದ್ಯೋಗ ನೀಡುವುದಾಗಿ ಹೇಳಿದ್ದರು. ಆದರೆ ಅವರ ಘೋಷಣೆ ಘೋಷಣೆಯಾಗಿಯೇ ಉಳಿದಿದೆ. ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ ಘೋಷಿಸಿದ ಎಲ್ಲಾ ಯೋಜನೆಗಳನ್ನು ಈಡೇರಿಸಿದೆ. ಅದಕ್ಕಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ತಿಳಿಸಿದರು.

ಮಾಜಿ ಸಿಎಂ ಸಿದ್ದರಾಮಯ್ಯನವರ ಸ್ಪರ್ಧೆ ಬಗ್ಗೆ ಹೈಕಮಾಂಡ್ ಗೆ ಬಿಟ್ಟ ವಿಚಾರ. ನಾವು ಸವದತ್ತಿಯಲ್ಲಿ ಸ್ಪರ್ಧೆ ಮಾಡುತ್ತಿರಾ.? ಎಂದು ಕೇಳಿದ್ದಿವಿ. ಆದರೆ ಅವರು ಸವದತ್ತಿಯಲ್ಲಿ ಸ್ಪರ್ಧಿಸಲ್ಲ ಎಂದಿದ್ದಾರೆ. ಹೀಗಾಗಿ ಸ್ಥಳೀಯರಿಗೆ ಆದ್ಯತೆ ನೀಡಲಾಗುವು ಎಂದರು.

ಸದ್ಯ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟ ಮಾಡಿಲ್ಲ. ಮೊದಲ ಪಟ್ಟಿಯನ್ನು ಮಾರ್ಚ್ 22 ರಂದು ಬಿಡುಗಡೆಯಾಗಲಿದೆ. ಇನ್ನೂ ರಮೇಶ ಕತ್ತಿ ಕಾಂಗ್ರೆಸ್ ಸೇರ್ಪಡೆಯಾಗುವ ಬಗ್ಗೆ ನನ್ನ ಜತೆ ಚರ್ಚೆಯಾಗಿಲ್ಲ. ಸಾಕಷ್ಟು ಜನ ಬೇರೆ ಪಕ್ಷದವರು ಕಾಂಗ್ರೆಸ್ ಸೇರ್ಪಡೆಯಾಗುವ ಸಾಧ್ಯತೆ ಇದೆ ಎಂದು ಇದೇ ವೇಳೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಎಐಸಿಸಿ ವೀಕ್ಷಕ ವಿಶ್ವನಾನಂದ, ಯುತ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ನಲಪಾಡ, ಮಾಜಿ ಶಾಸಕ ಸುಭಾಷ್ ಜೋಶಿ, ಕಾಂಗ್ರೆಸ್ ಮುಖಂಡರಾದ ಕಿರಣ ಸಾಧುನವರ್, ಬಸವರಾಜ ಶಿಗ್ಗಾವಿ, ವಿವೇಕ ಜತ್ತಿ, ಮಹೇಶ ಕಡಪಟ್ಟಿ, ಆನಂದ ಘಡ್ಡದವರ್ ಮಟ್ಟ, ಮನಸೂರ ಖಾನ್ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಇದ್ದರು.

## ಮಾ.20ರಂದು ಮೂಡಲಗಿಯಲ್ಲಿ ಮುಸ್ಲಿಂ ಸಮಾಜ ಬೃಹತ ಸಮಾವೇಶ

ಮೂಡಲಗಿ: ಅರಭಾವಿ ಮತ ಕ್ಷೇತ್ರದಲ್ಲಿ ಸರ್ವ ಧರ್ಮ ಹಿತ ಚಿಂತಕ ಹಾಗೂ ಕೆ.ಎಂ. ಎಫ್ ಅಧ್ಯಕ್ಷ ಹಾಗೂ ಅರಭಾವಿ ಮತಕ್ಷೇತ್ರದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರಿಗೆ ಎಪ್ರೀಲ್–ಮೇ ನಲ್ಲಿ ನಡೆಯುವ ರಾಜ್ಯದ ವಿಧಾನಸಭೆಯ ಸಾರ್ವತ್ರಿಕ ಚುನಾವಣೆಯ ಬೆಂಬಲಾರ್ಥವಾಗಿ ಮೂಡಲಗಿ ಪಟ್ಟಣದ ತಹಶೀಲ್ದಾರ ಕಛೇರಿ ಹತ್ತಿರ ಮಾ.20 ರಂದು ಮಧ್ಯಹ್ನಾ 12 ಗಂಟೆಗೆ ಅರಭಾವಿ ಮತ ಕ್ಷೇತ್ರದ ಮುಸ್ಲಿಂ ಸಮಾಜ ಭಾಂದವರಿಂದ ಬೃಹತ ಸಮಾವೇಶವನ್ನು ಹಮ್ಮಿಕೊಳ್ಳಲ್ಲಾಗಿದೆ ಎಂದು ಮುಸ್ಲಿಂ ಸಮಾಜ ಮುಖಂಡರಾದ ಎಚ್.ಡಿ.ಮುಲ್ಲಾ ಹೇಳಿದರು.

ಅವರು ಶನಿವಾರದಂದು ಪಟ್ಟಣದ ಅಂಜುಮನ್ಎ–ಇಸ್ಲಾಂ ಎಜ್ಯುಕೇಷನ &ಸೋಶಿಯಲ್ ಡೆವಲಮೆಂಟ ಸೊಸೈಟಿಯಲ್ಲಿ ಜರುಗಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅರಭಾವಿ ಮತ ಕ್ಷೇತ್ರದಲ್ಲಿ ಶಾಸಕ ಬಾಲಚಂದ್ರ




ಜಾರಕಿಹೊಳಿ ಅವರು ಮುಸ್ಲಿಂ ಸಮಾಜಕ್ಕೆ ಶೈಕ್ಷಣಿ, ಸಾಮಾಜಿಕ ಸೇರಿದಂತೆ ಅನೇಕ ಜನಪರ ಕಾರ್ಯಗಳನ್ನು ಕೈಗೊಂಡಿದ್ದಾರೆ. ಅಭಿವೃದ್ಧಿ ಹರಿಕಾರ ಬಾಲಚಂದ್ರ ಜಾರಕಿಹೊಳಿ ವ್ಯಕ್ತಿಯನ್ನು ನೋಡಿ ಮುಸ್ಲಿಂ ಸಮಾಜ ಭಾಂದವರು ಒಂದಾಗಿ ಒಗ್ಗಟಿನಿಂದ ಸಮಾವೇಶ ಮಾಡುತ್ತಿದೇವೆ ಎಂದರು.

ಮುಖಂಡ ಲಾಲಸಾಬ ಸಿದ್ದಾಪೂರ ಮಾತನಾಡಿ, ಕೆ.ಎಮ್.ಎಫ್ ಅಧ್ಯಕ್ಷ ಹಾಗೂ ಅರಬಾವಿ ಶಾಸಕ ಬಾಲಚಂದ್ರ ಜಾರಿಹೊಳಿ ಅವರು ಮುಸ್ಲಿಂ ಸಮಾಜಕ್ಕೆ ಮಾಡಿರುವ ಅಭಿವೃದ್ಧಿ ಹಾಗೂ ಸಮಾಜ ಮೇಲಿನ ಕಾಳಜಿಯನ್ನು ನಮ್ಮ ಸಮಾಜ ಭಾಂದವರಿಗೆ ತಿಳಿಸಿಸಲು ಹಾಗೂ ಮನವರಿಕೆ ಮಾಡಿಕೊಡಲ್ಲು ಸಮಾವೇಶ ಏರ್ಪಡಿಸಲಾಗಿದೆ ಎಂದರು.

ಮೂಡಲಗಿ ಅಂಜುಮನ್ ಎ–ಇಸ್ಲಾಂ ಎಜ್ಯುಕೇಷನ ಮತ್ತು ಸೋಶಿಯಲ್ ಡೆವಲಮೆಂಟ ಸೊಸೈಟಿಯ ಅಧ್ಯಕ್ಷ ಮಲೀಕ ಹುಣಶ್ಯಾಳ ಮಾತನಾಡಿ, ಮಾ.20 ರಂದು ನಡೆಯು ಬೃಹತ ಮುಸ್ಲಿಂ ಸಮಾಜದ ಸಮಾವೇಶದಲ್ಲಿ ಮುಸ್ಲಿಂ ಮತ್ತು ಎಲ್ಲ ಹಿಂದು ಸಮಾಜ ಭಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾವೇಶವನ್ನು ಯಶಸ್ವಿಗೋಳಿಸಬೇಕೆಂದರು.

ಈ ಸಂಂಧರ್ಭಲ್ಲಿ ಮುಸ್ಲಿಂ ಸಮಾಜದ ಮುಖಂಡರಾದ ಅನ್ವರ ನದಾಫ್, ಹುಸೇನಸಾಬ ಶೇಖ, ನನ್ನುಸಾಬ ಶೇಖ, ಅಬ್ದುಲಗಫಾರ ಡಾಂಗೆ, ಹಾಸಿಮ ನಗರಾಚಿ, ಇಕಬಾಲ ಸರ್ಕಾವಸ್, ಇಸ್ಮಾಯಿಲ ಲಾಡಖಾನ, ಮೈನು ಪಟೇಲ, ಶಾನೂರ ಮೊಗಲ, ಇದರೀಶ ಕಲಾರಕಪ್ಪ, ಅಮ್ಮಿನಶಾ ಪಿರಜಾದೆ, ರಸುಲ ಮಿರ್ಜಾನಾಯ್ಕ, ಚಾಂದಸಾಬ ದೇಶಾಯಿ, ಶಾಬುದಿನ ಹುಣಶ್ಯಾಳ, ಸುಲೇಮಾನ ಮುಲ್ತಾನಿ ಮತ್ತಿತರರು ಉಪಸ್ಥಿತರಿದ್ದರು.

## 2.11 ಕೋಟಿ ರೂ. ವೆಚ್ಚದಲ್ಲಿ ರಸ್ತೆಗಳ ಅಭಿವೃದ್ಧಿ: ಲಕ್ಷ್ಮೀ ಹೆಬ್ಬಾಳಕರ್ ಭೂಮಿ ಪೂಜೆ



ಬೆಳಗಾವಿ: ಬಾಳೇಕುಂದ್ರಿ ಬಿ ಕೆ ಗ್ರಾಮದ ವಿವಿಧ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರದಿಂದ 1.87 ಕೋಟಿ ರೂ,ಗಳನ್ನು ಮಂಜೂರು ಮಾಡಿಸಿರುವ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್, ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಶನಿವಾರ ಭೂಮಿ ಪೂಜೆ ನೆರವೇರಿಸಿದರು.

ದತ್ತ ಕಾಲೋನಿ, ಪಂತ ನಗರ, ಹನುಮಾನ ನಗರ, ಅವಧೂತ ನಗರ ಹಾಗೂ ಲಕ್ಷ್ಮೀ ಕಾಲೋನಿಯ ರಸ್ತೆಗಳು ಈ ನಿಧಿಯಲ್ಲಿ ಅಭಿವೃದ್ಧಿಯಾಗಲಿವೆ. ಗ್ರಾಮಸ್ಥರ ಬೇಡಿಕೆಯಂತೆ ತೀವ್ರ ಪ್ರಯತ್ನ ಮಾಡಿ ಕೆಲಸ ಮಂಜೂರು ಮಾಡಿಸಿಕೊಂಡು ಬರುವಲ್ಲಿ ಹೆಬ್ಬಾಳಕರ್ ಯಶಸ್ವಿಯಾಗಿದ್ದಾರೆ. ಕಾಮಗಾರಿಯಲ್ಲಿ ಗುಣಮಟ್ಟ ಕಾಪಾಡಿಕೊಂಡು ಸಮಯ ಮಿತಿಯಲ್ಲಿ ಪೂರ್ಣಗೊಳಿಸುವಂತೆ ಹೆಬ್ಬಾಳಕರ್ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಮೈನೂದ್ದಿನ ಅಗಸಿಮನಿ, ಗುಲಾಬಿ ಕೋಲಕಾರ, ಅಫ್ಸರ್ ಜಮಾದಾರ, ಬಸಪ್ಪ, ಕಲ್ಲಪ್ಪ ಕಲಕಾಂಬ್ಕರ್, ಜಮೀಲ್ ಕಾಜಿ, ಚಂದು ಪಾಟೀಲ, ಅಶೋಕ ಪತ್ತಾರ, ಪ್ರಲ್ಹಾದ ಪಾಟೀಲ, ಸಾಗರ ಪಾಟೀಲ, ಅಲ್ತಾಫ್ ಯಾದವಾಡ, ಕಲ್ಲಪ್ಪ ಹಿರೋಜಿ, ಪಾರ್ವತಿ ತಳವಾರ, ಬಿಬಿ ಹನೀಫಾ, ನಿಂಗನಗೌಡ ಪಾಟೀಲ, ಬಿ ಬಿ ಸುಂಕದ, ಗೀತಾ ಗುಜನಟ್ಟಿ, ಗೌಸ್ ಸುತಾರ, ಎಚ್ ಕೆ ಬಾಗವಾನ ಹಾಗೂ ಮುಂತಾದವರು ಉಪಸ್ಥಿತರಿದ್ದರು.

**ಮುತಗಾ ರಸ್ತೆ:**

ಮುತಗಾ ಗ್ರಾಮದ ವೆಂಕಟೇಶ ನಗರದ ರಸ್ತೆಗಳನ್ನು ಅಭಿವೃದ್ಧಿ ಪಡಿಸಟಿರ ಸರ್ಕಾರದಿಂದ 24 ಲಕ್ಷ ರೂ,ಗಳನ್ನು ಮಂಜೂರು ಮಾಡಿಸಿರುವ ಲಕ್ಷ್ಮೀ ಹೆಬ್ಬಾಳಕರ್, ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಭೂಮಿ ಪೂಜೆಯನ್ನು ಕೈಗೊಂಡು, ಚಾಲನೆಯನ್ನು ನೀಡಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಗಜಾನನ ಕಣಬರ್ಕರ್, ಪಿಂಟು ಮಲ್ಲವ್ವಗೋಳ, ಶ್ಯಾಮ ಮುತಗೇಕರ್, ಕೃಷ್ಣ ಪಾಟೀಲ, ಸಚಿನ ಪಾಟೀಲ, ಶರತ್ ಪಾಟೀಲ, ರಾಧಿಕಾ ಮುತಗೇಕರ್, ಬಾಗಣ್ಣ ಮಲ್ಲವ್ವಗೋಳ ಹಾಗೂ ಮುಂತಾದವರು ಉಪಸ್ಥಿತರಿದ್ದರು.

## ಜೆ.ಡಿ.ಎಸ್ ಪೂರ್ವ ಭಾವಿ ಸಭೆ ಮಾ.21 ಜೆಡಿಎಸ್‌ನ ಬೃಹತ್ ಜನಜಾಗೃತಿ ಸಮಾವೇಶ



ಕಲಕೇರಿ : ಬರತಕ್ಕಂತ 21ರ ಮಂಗಳವಾರದಂದು ಕಲಕೇರಿಯ ಗುರು ವೀರಘಂಟಿ ಮಡಿವಾಳೇಶ್ವರ ದೇವಸ್ಥಾನದ ಆವರಣದಲ್ಲಿ ಜೆಡಿಎಸ್‌ನ ಬೃಹತ್ ಜನಜಾಗೃತಿ ಸಮಾವೇಶ ಜರುಗಲಿದ್ದು ಈ ಕಾರ್ಯಕ್ರಮದಲ್ಲಿ ಜೆ.ಡಿ.ಎಸ್ ರಾಜ್ಯಾಧ್ಯಕ್ಷರಾದ ಸಿ.ಎಂ ಇಬ್ರಾಯಿಂ ಜಿಲ್ಲಾಧ್ಯಕ್ಷರಾದ ಬಸನಗೌಡ ಮಾಡಗಿ, ಹಾಗೂ ಜಿಲ್ಲೆಯ, ತಾಲೂಕಿನ, ಜೆ,ಡಿ.ಎಸ್, ಮುಖಂಡರುಗಳು ಆಗಮಿಸುತ್ತಿಸುವರು ನಮ್ಮ ನಾಯಕರಾದ ರಾಜುಗೌಡ ಪಾಟೀಲ ಕುದರಸಾಲೋಡಗಿ ಇವರ ನೇತೃತ್ವದಲ್ಲಿ ಸಮಾವೇಶ ನಡೆಯಲಿದೆ ಎಂದು ತಾಳಿಕೋಟಿ ತಾಲೂಕಾ ಪ್ರಧಾನ ಕಾರ್ಯದಶಿಗಳಾದ ರಮೇಶ ಹೆಂಡಿ ಹಾಗೂ ತಾಳಿಕೋಟಿ ತಾಲೂಕಾ ಜೆ.ಡಿ.ಎಸ್ ಅಲ್ಪಸಂಖ್ಯಾತರ ಅಧ್ಯಕ್ಷರಾದ ಕಾಶೀಂ ನಾಯ್ಕೋಡಿ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ದೇವರಹಿಪ್ಪರಗಿ ಮತಕ್ಷೇತ್ರದ ಜೆ.ಡಿ.ಎಸ್,ನ ಅಭ್ಯರ್ಥಿಯಾದ ರಾಜುಗೌಡ ಪಾಟೀಲ ಪಾಟೀಲ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ ಈ ಕಾರ್ಯಕ್ರಮದಲ್ಲಿ ಸುಮಾರು 10–15 ಸಾವಿರ ಕಾರ್ಯಕರ್ತರು ಸೇರುವ ನೀರಿಕ್ಷೇಇದೆ, ನಮ್ಮ ನಾಯಕರಾದ ಕುಮಾರಸ್ವಾಮಿ ಹಾಗೂ ರಾಜ್ಯಾಧ್ಯಕ್ಷರಾದ ಸಿ.ಎಂ ಇಬ್ರಾಹಿಂ ಅವರ ಮಾರ್ಗದರ್ಶನದಂತೆ ಈ ಭಾರಿ ಖಂಡಿತವಾಗಿಯೂ ಜೆ.ಡಿ.ಎಸ್ ಪಕ್ಷ ಗೆದ್ದು ಅಧಿಕಾರ ಹಿಡಿಯಲಿದೆ ಎಂದರು.

ಈ ವೇಳೆ ಮುಖಂಡರಾದ ಸುನೀಲಗೌಡ ಪಾಟೀಲ, ಸಲೀಂ ನಾಯ್ಕೋಡಿ, ದ್ಯಾವಪ್ಪ ಕುದರಗುಂಡ, ಶ್ರೀಶೈಲ ಅಡಕಿ, ಪ್ರಕಾಶ ಗುಮಶೆಟ್ಟಿ, ಹಣಮಂತ ವಡ್ರ, , ಆನಂದ ಅಡಕಿ, ಚಂದ್ರು ಬಡಿಗೇರ, ಹಾಜಿಪಾಶಾ ಜಾಗೀರದಾರ, ಸತೀಶ ಕಡಕೋಳ, ಈಶ್ವರ ಬಡಿಗೇರ, ಸೇರಿದಂತೆ ಕಲಕೇರಿ ಸುತ್ತಮುತ್ತಲಿನ ಜೆ.ಡಿ.ಎಸ್ ನ ಅಭಿಮಾಣಿಗಳು ಕಾರ್ಯಕರ್ತರರು ಉಪಸ್ಥಿರಿದ್ದರು.

## ಐಐಎಫ್‌ಎಲ್ ಫೈನಾನ್ಸ್‌ನ 'ಯುಗಾದಿ ಉತ್ಸವ'




ಹುಬ್ಬಳ್ಳಿ: ಭಾರತದ ಅತಿದೊಡ್ಡ ಬ್ಯಾಂಕಿಂಗ್ ಅಲ್ಲದ ಹಣಕಾಸು ಕಂಪನಿಗಳಲ್ಲಿ ಒಂದಾಗಿರುವ ಐಐಎಫ್‌ಎಲ್ ಫೈನಾನ್ಸ್, ಕರ್ನಾಟಕದ ಗ್ರಾಹಕರಿಗೆ ಅತ್ಯಾಕರ್ಷಕ ಕೊಡುಗೆಗಳೊಂದಿಗೆ 'ಯುಗಾದಿ ಉತ್ಸವ'ವನ್ನು ಪ್ರಾರಂಭಿಸಿದೆ. ಈ ಕೊಡುಗೆಯು ಕರ್ನಾಟಕದ ಎಲ್ಲಾ ಶಾಖೆಗಳಲ್ಲಿ ಮಾರ್ಚ್ 31, 2023 ರವರೆಗೆ ಮಾನ್ಯವಾಗಿರುತ್ತದೆ. ಪ್ರಚಾರದ ಅವಧಿ ಯಲ್ಲಿ ಗ್ರಾಹಕರು ಚಿನ್ನದ ಸಾಲವನ್ನು ಪಡೆದಾಗ ಈ ಕೆಳಗಿನ ಖಚಿತ ಉಡುಗೊರೆಗಳನ್ನು– ಇ– ಸೈಕಲ್, ಬ್ಯಾಕ್‌ಪ್ಯಾಕ್, ವಾಟರ್ ಬಾಟಲ್ಅಥವಾ ಗೋಡೆಗಡಿಯಾರವನ್ನು ಮನೆಗೆ ತೆಗೆದುಕೊಂಡು ಹೋಗುತ್ತಾರೆ. ಐಐಎಫ್‌ಎಲ್ ಫೈನಾನ್ಸ್ ಈ ಪ್ರದೇಶದ ಅತಿದೊಡ್ಡ ಹಬ್ಬಗಳ ಆಚರಣೆಯ ಭಾಗವಾಗಿ ಮುಂದುವರಿಯಲು ಬಯಸುತ್ತಿರುವುದರಿಂದ 'ಯುಗಾದಿ ಉತ್ಸವ'ವನ್ನು ಕರ್ನಾಟಕದಲ್ಲಿ ವಿಶೇಷವಾಗಿ ಪ್ರಾರಂಭಿಸಲಾಗಿದೆ.

ಯುಗಾದಿ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡುತ್ತಾ, ಐಐಎಫ್‌ಎಲ್ ಫೈನಾನ್ಸ್‌ನಲ್ಲಿ ಚಿನ್ನದ ಸಾಲಕ್ಕಾಗಿ ಕರ್ನಾಟಕ ವಲಯದ ಮುಖ್ಯಸ್ಥರಾದಅನುರಾಗ್ ಮಿಶ್ರಾ ಹೇಳಿದರು, "ಐಐಎಫ್‌ಎಲ್ ಚಿನ್ನದ ಸಾಲವು ಕರ್ನಾಟಕ ದಲ್ಲಿ ಹೆಚ್ಚಿನ ಗ್ರಾಹಕರ ನಿಷ್ಠೆಯನ್ನು ಹೊಂದಿರುವ ಅತ್ಯಂತ ಆದ್ಯತೆಯಚಿನ್ನದ ಸಾಲದ ಬ್ರಾಂಡ್‌ಗಳಲ್ಲಿ ಒಂದಾಗಿದೆ. ನಮ್ಮಕೃತಜ್ಞತೆಯನ್ನು ತೋರಿಸಲು, ನಾವು ಎಲ್ಲರಿಗೂ ಖಚಿತವಾದ ಉಡುಗೊರೆಗಳೊಂದಿಗೆ 'ಯುಗಾದಿ ಉತ್ಸವ'ವನ್ನುಆಚರಿಸುತ್ತಿದ್ದೇವೆ.

ಎಲ್ಲಾ ಗೋಲ್ಡ್ ಲೋನ್‌ಗ್ರಾಹಕರು ಕರ್ನಾಟಕ ದಾದ್ಯಂತ ನಮ್ಮಯಾವುದೇ ಶಾಖೆಗಳಿಗೆ ನಡೆಯಲು ಮತ್ತು ಕೊಡುಗೆಯನ್ನು ಉತ್ತಮವಾಗಿ ಬಳಸಿಕೊಳ್ಳುವಂತೆ ನಾವು ವಿನಂತಿಸುತ್ತೇವೆ.

ಆಕರ್ಷಕ ಉಡುಗೊರೆಗಳ ಜೊತೆಗೆ, ಐಐಎಫ್‌ಎಲ್ ಫೈನಾನ್ಸ್‌ತ್ವರಿತ ಪ್ರಕ್ರಿಯೆ, ಗರಿಷ್ಠ ಸಾಲದ ಮೌಲ್ಯ, ಯಾವುದೇ ಗುಪ್ತ ಶುಲ್ಕಗಳಿಲ್ಲದೆ ಸುಲಭಡಿಜಿಟಲ್ ಪಾವತಿ ಆಯ್ಕೆಗಳ ಬದ್ಧತೆಯೊಂದಿಗೆ ತಿಂಗಳಿಗೆ ಅತ್ಯಂತ ಆಕರ್ಷಕ ಬಡ್ಡಿದರಗಳಲ್ಲಿ ಚಿನ್ನದ ಸಾಲ ನೀಡುತ್ತದೆ.

ಐಐಎಫ್‌ಎಲ್ ಫೈನಾನ್ಸ್ ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ಮತ್ತು ಹೆಚ್ಚು ಚಿಲ್ಲರೆ–ಕೇಂದ್ರಿತ ಹಣಕಾಸು ಕಂಪನಿಗಳಲ್ಲಿ ಒಂದಾಗಿದೆ, ಸುಮಾರು 58,000 ಕೋಟಿ ಸಾಲದ ಆಸ್ತಿ ನಿರ್ವಹಣೆಯ ಅಡಿಯಲ್ಲಿದೆ. ಐಐಎಫ್‌ಎಲ್ ಫೈನಾನ್ಸ್ ಗ್ರಾಹಕರೊಂದಿಗೆ #SeedhiBaat ಮತ್ತುಕಡಿಮೆ ವೆಚ್ಚದಲ್ಲಿ ಮತ್ತುಯಾವುದೇ ಗುಪ್ತ ಶುಲ್ಕಗಳಿಲ್ಲದೆ ಸಾಲಗಳನ್ನು ನೀಡುವುದರಿಂದಅದರಗ್ರಾಹಕರ ನೆಲೆ ಮತ್ತು ವ್ಯವಹಾರವು ಗಣನೀಯವಾಗಿ ಬೆಳೆಯುತ್ತಿದೆ.

ಐಐಎಫ್‌ಎಲ್ ಫೈನಾನ್ಸ್ಇತ್ತೀಚೆಗೆ ಪ್ರಮುಖ ನಟಿತಮನ್ನಾ ಭಾಟಿಯಾಅವರೊಂದಿಗೆ 'ಸಪ್ನಾ ಆಪ್ಕಾ ಲೋನ್ ಹುಮಾರಾ' ಅಭಿಯಾನವನ್ನು ಪ್ರಾರಂಭಿಸಿತು.

## ವಿವಿದೆಡೆ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗೆ ಚಾಲನೆ



ಬೆಳಗಾವಿ : ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ಅನಿಲ ಬೆನಕೆ ರವರು ಮಹಾನಗರ ಪಾಲಿಕೆಯ ಅನುದಾನದಲ್ಲಿ ಬೆಳಗಾವಿ ನಗರದ ಮರಾಠಾ ಮಂಡಳ ದಿಂದ ಕೃಷ್ಣದೇವರಾಜ ವೃತ್ತ ಹಾಗೂ ರುಕ್ಮೀಣಿ ನಗರದಲ್ಲಿ ರಸ್ತೆ, ಚರಂಡಿ ಹಾಗೂ ಪೇವರ್ಸ ಅಳವಡಿಸುವ ಕಾಮಗಾರಿಗಳಿಗೆ ಭೂಮಿ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು ಮಹಾನಗರ ಪಾಲಿಕೆ ಅನುದಾನದಲ್ಲಿ ಬೆಳಗಾವಿಯ ಕೃಷ್ಣದೇವರಾಜ ವ್ರತ್ತ (ಕೋಲ್ಹಾಪೂರ ವ್ರತ್ತ) ದಿಂದ ಮರಾಠಾ ಮಂಡಳದ ಅಂಧ ಮಕ್ಕಳ ಶಾಲೆಯ ಹತ್ತಿರದಲ್ಲಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಮತ್ತು ರುಕ್ಮೀಣಿ ನಗರದಲ್ಲಿ ಪೇವರ್ಸ ಅಳವಡಿಸುವ ಕಾಮಗಾರಿಗಳಿಗೆ ಭೂಮಿ ಪೂಜೆಯಲ್ಲಿ ಸಲ್ಲಿಸಲಾಗಿದೆ.

17.94 ಲಕ್ಷ ವೆಚ್ಚದ ಕಾಮಗಾರಿಗಳಾಗಿದ್ದು, ಗುತ್ತಿಗೆದಾರರು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಿಬೇಕೆಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರೊಂದಿಗೆ ನಗರ ಸೇವಕರು ಹಾಗೂ ಆಡಳಿತ ಪಕ್ಷ ನಾಯಕರಾದ ರಾಜಶೇಖರ ಢೋಣಿ, ನಗರ ಸೇವಕರಾದ ಹನಮಂತ ಕೊಂಗಾಲಿ, ಶಾಹೀದ ಪಠಾಣ, ಮಹಾನಗರ ಪಾಲಿಕೆಯ ಸಹಾಯಕ ಅಭಿಯಂತರುಗಳಾದ ಕೇರೂರ, ಯಲ್ಲಪ್ಪ ಸೇರಿದಂತೆ ಅಲ್ಲಿನ ಹಲವಾರು ಸ್ಥಳೀಯ ಕಾರ್ಯಕರ್ತರು, ರಹವಾಸಿಗಳು ಮತ್ತು ಗುತ್ತಿಗೆದಾರ ಸಿ. ಎಮ್. ನರಸನ್ನವರ ಉಪಸ್ಥಿತರಿದ್ದರು.

## ಅಪ್ಪು ಒಬ್ಬ ಅಪರೂಪದ ನಟ, ಸಮಾಜ ಸೇವಕ



ಬೆಳಗಾವಿ : ದಿವಂಗತ ಪುನೀತ್ ರಾಜಕುಮಾರ್ ಅವರು ಒಬ್ಬ ಅಪರೂಪದ ನಟ ಮತ್ತು ಅಪರೂಪದ ಸಮಾಜ ಸೇವಕ ಎಂದು ಬೆಳಕಾವಿ ಗ್ರಾಮೀಣ ಶಾಸಕ ಶ್ರೀಮತಿ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಹೇಳಿದರು.

ಅವರು ಅಪ್ಪು ಜನ್ಮದಿನೋತ್ಸವ ಸಮಾರಂಭದಲ್ಲಿ ಪರ್ಯಾಯ ಕನ್ನಡ ಚಲನಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ನಗರದ ಸಿ.ಪಿ.ಇ.ಡಿ ಗ್ರೌಂಡ್ ನಲ್ಲಿ ಅಪ್ಪು ಅಭಿಮಾನಿ ಬಳಗ ಅಯೋಜಿಸಿದ್ದ ಅಪ್ಪು ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಕೇಕ್ ಕಟ್ ಮಾಡುವ ಮೂಲಕ ಚಾಲನೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಪರ್ಯಾಯ ಚಲನಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನ್ನು ಬೆಳಗಾವಿ ಗ್ರಾಮೀಣ ಕ್ಷೇತ್ರದ ವಿಧಾನಸಭಾ ಸದಸ್ಯೆ ಲಕ್ಷ್ಮಿ ಹೆಬ್ಬಾಳಕರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು ಪುನಿತ್ ರಾಜಕುಮಾರ್ ಅವರ ಸರಳತೆ ಅದರ್ಶ ಹಾಗು ಅವರ ಕುಟುಂಬದೊಂದಿಗೆ ಇದ್ದ ಬಾಂದವ್ಯದ ಕುರಿತು ಮಾಹಿತಿ ನೀಡಿದರು. ಪರ್ಯಾಯ ಚಿತ್ರ ತಂಡಕ್ಕೆ ಶುಭ ಹಾರೈಸಿದ ಅವರು ಈ ಚಿತ್ರವು ಉತ್ತಮ ಸಂದೇಶದೊಂದಿಗೆ ಮೂಡಿಬರಲಿ ಎಂದರು.

ಕಾರ್ಯಕ್ರಮದ ಸಾನಿದ್ಯ ವಹಿಸಿದ್ದ ಶ್ರೀ ಶಂಕರಲಿಂಗ ಗುರುಪೀಠದ ಶ್ರೀ ಸೋಮಲಿಂಗ ಮಹಾಸ್ವಾಮಿಗಳು ಮಾತನಾಡಿ ಪುನಿತ್ ರಾಜಕುಮಾರ್ ಅವರ ಪರೋಪಕಾರ ಗುಣ ಅನುಕರಣೀಯ ಎಂದರು, ನಾವು ಮಾಡುವ ಕಾಯಕವನ್ನು ಶ್ರದ್ಧೆಯಿಂದ ಮಾಡಬೇಕು ಎಂದ ಅವರು ಯುವಜನರು ಉತ್ತಮ ಅಚಾರವಿಚಾರಗಳನ್ನು ಮೈಗೂಡಿಸಿಕೊಳ್ಳಬೇಕೆಂದರು. ಪರ್ಯಾಯ ಚಲನಚಿತ್ರ ಸದಭಿರುಚಿಯ ಚಿತ್ರವಾಗಿ ಜನಮನ್ನಣೆ ಗಳಿಸಲಿ ಎಂದರು.

ಚಲನಚಿತ್ರ ನಿರ್ದೇಶಕ ರಮಾನಂದ ಮಿತ್ರ, ಮಮತ ಕ್ರಿಯೇಷನ್ ನ ರಾಜಕುಮಾರ್ ಮತ್ತು ಮುರುಗೇಶ್ ಶಿವಪೂಜಿ ಚಿತ್ರೀಕರಣ ಸಂದರ್ಭದ ಅನುಭವಗಳನ್ನು ಹಂಚಿಕೊಂಡರು. ಸ್ಥಳೀಯ ಕಲಾವಿದರಾದ ಶ್ರೀಮತಿ ಶಾಂತ ಆಚಾರ್ಯ, ಶ್ರೀ ವಿಶ್ವನಾಥ ದೇಸಾಯಿ ಮತ್ತು ಅವರ ತಂಡದವರು ಮತ್ತಿತರ ಪುನೀತ್ ಅಭಿಮಾನಿಗಳು ಪುನೀತ್ ರಾಜಕುಮಾರ್ ಅವರ ಚಲನಚಿತ್ರಗಳ ಗೀತೆಗಳನ್ನು ಹಾಡಿ ಪ್ರೇಕ್ಷಕರ ಮನರಂಜಿಸಿದರು. ಕಾರ್ಯಕ್ರಮದಲ್ಲಿ ರಂಜನ್ ರಾಜ್, ಶಿವಾನಂದ್ ಚಿಕ್ಕಮಠ , ಮತ್ತಿತರರು ಉಪಸ್ಥಿತರಿದ್ದರು.

## ನಾಳೆ ರಾಣಿಚನ್ನಮ್ಮ ವಿಶ್ವವಿದ್ಯಾಲಯದ 11ನೇ ವಾರ್ಷಿಕ ಘಟಿಕೋತ್ಸವ

ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ 11 ನೇ ಘಟಿಕೋತ್ಸವ ಸೋಮವಾರ (ಮಾ.20) ರಂದು ಮುಂಜಾನೆ 11 ಗಂಟೆಗೆ ಸುವರ್ಣ ವಿಧಾನ ಸೌಧದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಘಟಿಕೋತ್ಸವದಲ್ಲಿ ಒಟ್ಟು 47,185 ಸ್ನಾತಕ ಹಾಗೂ ಸ್ನಾತ–ಕೋತ್ತರ ವಿದ್ಯಾರ್ಥಿಗಳು ಪದವಿಯನ್ನು ಪಡೆದುಕೊಳ್ಳಲಿದ್ದಾರೆ. ಸ್ನಾತಕೋತ್ತರ ಹಾಗೂ ಸ್ನಾತಕ ವಿದ್ಯಾರ್ಥಿಗಳಿಗೆ 11 ಸ್ವರ್ಣ ಪದಕಗಳನ್ನು ನೀಡಲಾಗುವುದು. 27 ಪಿಹೆಚ್.ಡಿ. ಪದವಿಗಳನ್ನು ಪ್ರದಾನ ಮಾಡಲಾಗುವುದು ಎಂದು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೋ. ರಾಮಚಂದ್ರಗೌಡ ಅವರು ತಿಳಿಸಿದರು.

ನಗರದ ವಾರ್ತಾ ಭವನದಲ್ಲಿ ಶನಿವಾರ(ಮಾ.18) ನಡೆದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ 11 ನೇ ಘಟಿಕೋತ್ಸವದ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ರಾಜ್ಯದ ಗೌರವಾನ್ವಿತ ಕುಲಾಧಿಪತಿಗಳು ಹಾಗೂ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ವಹಿಸಲಿದ್ದಾರೆ. ಸಹಕುಲಾಧಿಪತಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ




ಮತ್ತು ಜೈವಿಕ ತಂತ್ರಜ್ಞಾನ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಸಿ.ಎನ್. ಅಶ್ವತ್ಥನಾರಾಯಣ ಅವರು ಉಪಸ್ಥಿತರಿರುವರು. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಉಪಾಧ್ಯಕ್ಷರಾದ ಪ್ರೊ. ಬಿ. ತಿಮ್ಮೇಗೌಡ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ ಎಂದು ತಿಳಿಸಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ವ್ಯಾಪ್ತಿ ಮತ್ತು ಗಾತ್ರದಲ್ಲಿ ರಾಜ್ಯದಲ್ಲಿಯೇ ಮಹತ್ವ ಸ್ಥಾನವನ್ನು ಪಡೆದುಕೊಂಡಿದೆ. ವಿಶ್ವವಿದ್ಯಾಲಯವು ಕಳೆದ ವರ್ಷ ನ್ಯಾಕ್ ಮನ್ನಣೆಯಲ್ಲಿ ಉನ್ನತ ಶ್ರೇಣಿಯನ್ನು ಪಡೆದುಕೊಂಡಿದೆ. ಇ–ಆಡಳಿತ ವ್ಯವಸ್ಥೆ ಜಾರಿಯಲ್ಲಿ ರಾಜ್ಯದಲ್ಲಿಯೇ ಮುಂಚೂಣಿಯಲ್ಲಿದೆ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ಕಳೆದೆರಡು ವರ್ಷಗಳಿಂದ ಅನುಷ್ಠಾನಗೊಳಿಸಿದೆ ಎಂದು ಹೇಳಿದರು.

ವಿಶ್ವವಿದ್ಯಾಲಯಕ್ಕೆ ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ 419 ಮಹಾವಿದ್ಯಾಲಯಗಳು ವಿಶ್ವವಿದ್ಯಾಲಯದ ಅಧೀನದಲ್ಲಿ ಸಂಯೋಜನೆಗೊಂಡಿವೆ. ಸುಮಾರು 1.50 ಲಕ್ಷ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ವಿಜಯಪುರ ಮತ್ತು ಜಮಖಂಡಿಯಲ್ಲಿ ಸ್ನಾತಕೋತ್ತರ ಕೇಂದ್ರಗಳನ್ನು, ಬೆಳಗಾವಿಯಲ್ಲಿ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆಘಟಕ ಮಹಾವಿದ್ಯಾಲಯವನ್ನು ವಿಶ್ವವಿದ್ಯಾಲಯವು ಹೊಂದಿದ್ದು, ಅಲ್ಲದೆ 49 ಕಾಲೇಜುಗಳಲ್ಲಿ ಸ್ನಾತಕೋತ್ತರ ಕೇಂದ್ರಗಳಲ್ಲಿ ಉನ್ನತ ಶಿಕ್ಷಣಕ್ಕೆ ಅವಕಾಶ ಕಲ್ಪಿಸಲಾಗಿದೆ.

22 ವಿಷಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ನಲ್ಲಿ 2500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉನ್ನತ ಅಧ್ಯಯನ ನಡೆಸುತ್ತಿದ್ದಾರೆ.665ಕ್ಕಿಂತ ಹೆಚ್ಚು ಸಂಶೋಧನಾರ್ಥಿಗಳಿಂದ ಹಲವಾರು ವಿಷಯಗಳಲ್ಲಿ ಪಿಎಚ್.ಡಿ ಸಂಶೋಧನೆಗಳು ನಿರಂತರವಾಗಿ ನಡೆಯುತ್ತಿವೆ. ವಿಶ್ವವಿದ್ಯಾಲಯವು ವಿವಿಧ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿಕೊಳ್ಳುತ್ತ ಜ್ಞಾನಮುಖಿ, ಸಮಾಜಮುಖಿ, ಉದ್ಯೋಗಮುಖಿ ಚಿಂತನೆಗಳನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರುವುದರೊಂದಿಗೆ ಶೈಕ್ಷಣಿಕವಾಗಿ ರಾಣಿಚನ್ನಮ್ಮ ವಿಶ್ವವಿದ್ಯಾಲಯವು ಗುಣಾತ್ಮಕವಾಗಿ ಬೆಳೆದು ನಿಂತಿದೆ. ಇದುವರೆಗೆ ಭೂತರಾಮನಹಟ್ಟಿಯ ಬಳಿ ಇರುವ 169.02 ಎಕರೆ ಜಮೀನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಹಸ್ತಾಂತರವಾಗದೇ ನೆನಗುದಿಗೆ ಬಿದ್ದಿರುವ ಹಿನ್ನೆಲೆಯಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದವು. ಈ ಸಂದರ್ಭದಲ್ಲಿ ಕರ್ನಾಟಕ ಘನ ಸರ್ಕಾರದ ಮಂತ್ರಿಮಂಡಳವು ಹಿರೇಬಾಗೇವಾಡಿಯ ಮಲ್ಲಪ್ಪನಗುಡ್ಡದ ಬಳಿ 126ಎಕರೆ 27 ಗುಂಟೆ ನೀಡಿರುವ ಜಮೀನಿನಲ್ಲಿ ಈಗಾಗಲೇ ಕಂಪೌಂಡ್ ಗೋಡೆಯ ನಿರ್ಮಾಣ ಪೂರ್ಣ ಗೊಂಡಿದ್ದು ಕಟ್ಟಡದ ನಿರ್ಮಾಣ ಕಾರ್ಯವು ತೀವ್ರ ಪ್ರಗತಿಯಲ್ಲಿದೆ ತಿಳಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089